MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 274 | ಶನಿವಾರ : 16-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 274 | SATURDAY : 16-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## 79ನೇ ಸ್ವಾತಂತ್ರ್ಯೋತ್ಸವ : ಸಿಎಂ ಸಿದ್ದರಾಮಯ್ಯ ಭಾಷಣದ ಮುಖ್ಯಾಂಶಗಳು



**ಬೆಂಗಳೂರು,ಆ.15–** ಅಭಿವೃದ್ಧಿಯ ಉತ್ತುಂಗ ತಲುಪಿ ಸಮಾಜಕ್ಕೆ ಮರಳಿ ಕೊಡುಗೆ ನೀಡುವುದೇ ಅತ್ಯುನ್ನತ ಸ್ವಾತಂತ್ರ್ಯ. ಕರ್ನಾಟಕ ಈಗಾಗಲೇ ಭಾರತದ ಐಟಿ ರಾಜಧಾನಿಯಾಗಿದ್ದು ಈಗ ನಾವು ಜಗತ್ತಿನ ನಾವೀನ್ಯತಾ ರಾಜಧಾನಿಯಾಗುವತ್ತ ಹೆಜ್ಜೆ ಇಡುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ನಗರದ ಮಾಣಿಕ್ ಷಾ ಪರೇಡ್ ಮೈದಾನದಲ್ಲಿಂದು 79ನೇ ಸ್ವಾತಂತ್ರ್ಯೊ?ತ್ಸವದ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಕರ್ನಾಟಕ ಕ್ವಾಂಟಮ್ ಮಿಷನ್ ವಿಜ್ಞಾನದ ಭವಿಷ್ಯವನ್ನು ರೂಪಿಸಲಿದೆ. ನಾವು ಕೇವಲ ಉದ್ಯೋಗಗಳನ್ನು ಸೃಷ್ಟಿಸುತ್ತಿಲ್ಲ. ಜನರ ಜೀವನ ಬದಲಾಯಿಸುವಂತಹ ಆಲೋಚನೆಗಳು, ಆವಿಷ್ಕಾರಗಳು, ಹೊಸತನಗಳನ್ನು ಸೃಷ್ಟಿಸುತ್ತಿದ್ದು, ನಮ ಆಲೋಚನೆಗಳು ಗಡೆಯಾಚೆಗೂ ತಲುಪಿವೆ ಎಂದರು.

ಒಕ್ಕೂಟ ಸರ್ಕಾರವು ತೆರಿಗೆ ಮುಂತಾದ ಸಂಪನೂಲಗಳನ್ನು ಹಂಚುವಾಗ ನಿಷ್ಪಕ್ಷಪಾತ

## ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಭಾರತ ಶಕ್ತಿಶಾಲಿ ರಾಷ್ಟ್ರವಾಗಿದೆ : ಶಾಸಕ ಮಾನಪ್ಪ ವಜ್ಜಲ್



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಆ.15–** ಭಾರತ ದೇಶದಲ್ಲಿ ಭಯೋತ್ಪಾದನೆಯನ್ನು ಸಂಪೂರ್ಣ ತೊಡೆದುಹಾಕಲು ಪ್ರಧಾನಿ ನರೇಂದ್ರ ಮೋದಿಯವರು ಪಣತೊಟ್ಟಿದ್ದು, ಈಗ ಭಾರತ ಪ್ರಪಂಚದಲ್ಲಿಯೇ ಶಕ್ತಿಶಾಲಿ ರಾಷ್ಟ್ರವಾಗಿ ಹೊರಹೊಮ್ಮುತ್ತಿದೆ, ಭಾರತವನ್ನು ಜಗತ್ತಿನ ಬೇರೆ ಬೇರೆ ರಾಷ್ಟ್ರಗಳು ನೋಡುವ ರೀತಿಯೇ ಬದಲಾಗಿದೆ ಇದಕ್ಕೆ ಮೋದಿಜೀಯವರ ಸಮರ್ಥ ನಾಯಕತ್ವವೇ ಕಾರಣ ಎಂದು ಶಾಸಕ ಮಾನಪ್ಪ ವಜ್ಜಲ್ ಹೇಳಿದರು.

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 79ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ದೇಶ ಕಾಯುವ ಸೈನಿಕರಿಗೆ ಶಕ್ತಿ ತುಂಬುವದರ ಜೊತೆಗೆ ದೇಶದ ಆರ್ಥಿಕ ಬಲಿಷ್ಠತೆ ಹೆಚ್ಚಾಗುತ್ತಿದೆ. ಆತ್ಮನಿರ್ಭರ ಭಾರತ, ಬೇಟಿ ಬಚಾವೊ ಬೇಟಿ ಪಡಾವೊ, ಜೀವನ ಜ್ಯೋತಿ ವಿಮಾ ಯೋಜನೆ, ಮೇಕ್ ಇನ್ ಇಂಡಿಯಾ, ಅಟಲ್ ಪಿಂಚಣಿ ಯೋಜನೆ ಸೇರಿ ನೂರಾರು ಯೋಜನೆಗಳ ಮೂಲಕ ಭಾರತ ದೇಶದ ಸದೃಢತೆಗೆ ಮೋದಿ ನೇತೃತ್ವದಲ್ಲಿ ಕೇಂದ್ರ ಸರಕಾರ ಮುಂದಾಗಿದೆ ಎಂದರು. ನಂತರ ಮಾತನಾಡಿದ ವಿಧಾನ ಪರಿಷತ್ ಸದಸ್ಯಶರಣಗೌಡ ಪಾಟೀಲ್ ಬಯ್ಯಾಪೂರ, ಯುವಕರಲ್ಲಿ ದೇಶಾಭಿಮಾನ ಮೂಡಬೇಕು. ಸ್ವತಂತ್ರ ತಂದುಕೊಡಲು ಶ್ರಮಿಸಿದ ಮಹಾತ್ಮಾ ಗಾಂಧೀಜಿ, ನೆಹರೂ, ಶುಭಾಸ್ ಚಂದ್ರ ಭೋಸ್ ಮುಂತಾದ ಮಹನೀಯರ ತತ್ವಾದರ್ಶ ನಮಗೆ ದಾರಿದೀಪವಾಗಬೇಕು ಎಂದರು. ದೇಶದ ಆರ್ಥಿಕ, ಸಾಮಾಜಿಕ ಬೆಳವಣಿಗೆಯಲ್ಲಿ ಯುವಕರ ಪಾತ್ರ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಯುವಕರು ದುಶ್ಚಟಗಳಿಗೆ ಮಾರುಹೋಗದೇ ಸಮಾಜ ಕಟ್ಟುವ ಕೆಲಸಕ್ಕೆ ಯುವಪೀಳಿಗೆ ಮುಂದಾಗಬೇಕು. ಎಂದು ಯುವಕರಿಗೆ ಕಿವಿಮಾತು ಹೇಳಿದರು.

ಧ್ವಜಾರೋಹಣ ನೆಡೆಸಿ ಮಾತನಾಡಿದ ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿ, ನವ ಭಾರತ ನಿರ್ಮಾಣದ ಕನಸು ಹೊತ್ತು ಸರಕಾರ ದೇಶದ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಕ್ಷೇತ್ರಗಳನ್ನು ಬಲಪಡಿಸುವತ್ತ ಧಾಪುಗಾಲು ಇಟ್ಟಿದೆ. ನಮ್ಮ ವಾಯುಪಡೆ, ನೌಕಾಪಡೆ, ಭೂಪಡೆಗಳು ಬಲಿಷ್ಠವಾಗಿವೆ.ಇದರಿಂದಾಗಿ ಜಗತ್ತು ಭಾರತದತ್ತ ತಿರುಗಿ ನೋಡುತ್ತಿದೆ.ದೇಶದಲ್ಲಿ ಶಾಂತಿ ನೆಲೆಸಲು ಭಾರತೀಯ ಸೈನಿಕರ ಪಾತ್ರ ಮಹತ್ವದ್ದಾಗಿದೆ. ದೇಶದ ಸಬಲೀಕರಣದಲ್ಲಿ ಯುವಕರ ಮಹತ್ವದ್ದು ಎಂದು ಯುವ ಭಾರತದ ಕುರಿತು ಮಾತನಾಡಿದರು. ನಂತರ ಶಾಲಾ ವಿದ್ಯಾರ್ಥಿಗಳಿಂದ ವಿವಿಧ ಸಂಸ್ಕೃತಿಕ ಕಾರ್ಯಕ್ರಮಗಳು ನೆಡೆದವು.ಈ ಸಂದರ್ಭದಲ್ಲಿ ತಹಶಿಲ್ದಾರ ಸತ್ಯಮ್ಮ, ಪುರಸಭೆ ಅಧ್ಯಕ್ಷ ಬಾಬುರೆಡ್ಡಿ ಮುನ್ನೂರು, ತಾಪಂ ಇಒ ಉಮೇಶ, ಬಿಇಒ ಸುಜಾತ ಹೂನೂರು, ಡಿವೈಎಸ್ ಪಿ ದತ್ತಾತ್ರೇಯ ಕಾರ್ನಾಡ್, ನಗರ ಪ್ರಾಧಿಕಾರ ಅಧ್ಯಕ್ಷ ಭೂಪನಗೌಡ ಪಾಟೀಲ್, ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸರೂರು, ಟಿಎಪಿಎಂಸಿ ಶಶಿಧರ ಪಾಟೀಲ್ ಆಶಿಹಾಳ, ಗ್ಯಾರಂಟಿ ಯೋಜನೆ ತಾಲೂಕ ಅಧ್ಯಕ್ಷ ವೆಂಕಟೇಶ ಗುತ್ತೆದಾರ ಸೇರಿದಂತೆ ತಾಲೂಕಿನ ವಿವಿಧ ಶಾಲಾ ಮುಖ್ಯ ಗುರುಗಳು, ವಿದ್ಯಾರ್ಥಿಗಳು, ದೇಶಾಭಿಮಾನಿಗಳು ಇದ್ದರು.

## ಜಿಲ್ಲಾಡಳಿತ ಭವನದಲ್ಲಿ ಸ್ವಾತಂತ್ರ್ಯ ದಿನಾಚರಣೆ; ರಾಷ್ಟ್ರ ಧ್ವಜಾರೋಹಣ

ಯುವ ಮಾರ್ಗ ಸುದ್ದಿ



**ರಾಯಚೂರು,ಆ.15–**ಇಲ್ಲಿನ ನೂತನ ಜಿಲ್ಲಾಡಳಿತ ಭವನದಲ್ಲಿ ಆಗಸ್ಟ್ 15ರಂದು 79ನೇ ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮ ನಡೆಯಿತು.

ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರಾದ ನಸೀರ್ ಅಹ್ಮದ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಡಾ.ಅಶೋಕ, ಜಿಲ್ಲಾಧಿಕಾರಿಗಳ ಕಚೇರಿಯ ಶಿರಸ್ತೇದಾರ ಸೂಗುರೇಶ ದೇಸಾಯಿ, ಸಿಬ್ಬಂದಿ ಮಲ್ಲೇಶ, ಪ್ರಕಾಶ್, ಅನೀಲ್ ಕುಲಕರ್ಣಿ ಸೇರಿದಂತೆ ಇತರರು ಇದ್ದರು.

## ತಾಲೂಕು ಆಡಳಿತದಿಂದ ಸಂಭ್ರಮದ 79 ನೇ ಸ್ವಾತಂತ್ರ್ಯ ದಿನಾಚಾರಣೆ ಕಾರ್ಯಕ್ರಮ

ಯುವ ಮಾರ್ಗ ಸುದ್ದಿ




**ಮಾನ್ವಿ,ಆ.15–** ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ವತಿಯಿಂದ ನಡೆದ 79 ನೇ ಸ್ವಾತಂತ್ರ ದಿನಾಚಾರಣೆ ಕಾರ್ಯಕ್ರಮ ಅಂಗವಾಗಿ ರಾಷ್ಟ್ರಪಿತ ಮಹಾತ್ಮಗಾಂಧಿ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ರಾಷ್ಟ್ರದ ತ್ರಿವರ್ಣಧ್ವಜಾರೋಹಣವನ್ನು ನೆರವೇರಿಸಿ ತಹಸೀಲ್ದಾರ್ ಭಿಮರಾಯ .ಬಿ. ರಾಮಸಮುದ್ರ ಸ್ವಾತಂತ್ರ ದಿನೋತ್ಸವದ ಸಂದೇಶವನ್ನು ನೀಡಿ ದೇಶದಲ್ಲಿನ ಅನೇಕ ವೀರ ಮಹಾನೀಯರ ತ್ಯಾಗ ಮತ್ತು ಬಲಿದಾನದ ನಂತರವೇ ನಮ್ಮ ದೇಶಕ್ಕೆ ಸ್ವಾತಂತ್ರ ದೊರೆತಿದೆ. ನಮ್ಮ ದೇಶದಲ್ಲಿ ವಿವಿಧ ಭಾಷೆ,ಜಾತಿ, ಧರ್ಮಗಳ ವೈವಿಧ್ಯತೆಯ ನಡುವೆಯು ಕೂಡ ಏಕತೆಯನ್ನು, ಭಾವೈಕ್ಯತೆಯನ್ನು ಕಾಣಬಹುದಾಗಿದೆ. ಪ್ರತಿಯೊಬ್ಬರು ಕೂಡ ದೇಶದ ಬಗ್ಗೆ ಗೌರವ,ದೇಶಭಕ್ತಿಯ ಭಾವ ಹೊಂದಿ ದೇಶದ ಅಭಿವೃದ್ದಿಗೆ ಏಕತೆಗೆ ಶ್ರಮಿಸಬೇಕಾಗಿದೆ ಸ್ವಾತಂತ್ರ ದಿನಾಚಾರಣೆ ಕಾರ್ಯಕ್ರಮವನ್ನು ಕೇವಲ ಆಚರಣೆಗೆ ಮಾತ್ರ ಸೀಮಿತಗೊಳಿಸದ ಪ್ರತಿ ಮನೆ,ಮನೆಯಲ್ಲಿ ಕೂಡ ಸ್ವಾತಂತ್ರ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಬೇಕಾಗಿದೆ ಎಂದು ತಿಳಿಸಿದರು.

ಮಾನ್ವಿ ಪುರಸಭೆಯ ಅಧ್ಯಕ್ಷರಾದ ಮೀನಾಕ್ಷಿ ಡಿ.ರಾಮಕೃಷ್ಣರವರು ವೇದಿಕೆಯ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ವಿವಿಧ ಕ್ಷೇತ್ರಗಳಲ್ಲಿ ಉತ್ತಮಸಾಧನೆ ತೋರಿದ ಸಾಧಕರನ್ನು ಸನ್ಮಾನಿಸಿ ಗೌರವಿಸಿದರು.

*2ನೇ ಪುಟಕ್ಕೆ*

## ಮಕ್ಕಳು ನಿರಂತರ ಕಲಿಕೆಯಿಂದ ಉನ್ನತ ಪದವಿಗೇರಲು ಸಾಧ್ಯ – ಕರೆಮ್ಮ ಗೋಪಾಲಕೃಷ್ಣ ನಾಯಕ



ಯುವ ಮಾರ್ಗ ಸುದ್ದಿ

**ದೇವದುರ್ಗ,ಆ.15–** ಶೈಕ್ಷಣಿಕ ಪ್ರಗತಿಗಾಗಿ ಸರ್ಕಾರ ಹೆಚ್ಚಿನ ಅನುದಾನ ಒದಗಿಸುತ್ತಿದ್ದು, ಮಕ್ಕಳು ನಿರಂತರ ಕಲಿಕೆಯಲ್ಲಿ ತೊಡಗುವುದರಿಂದ ಉನ್ನತ ಪದವಿಗೇರಲು ಸಾಧ್ಯವಿದೆ ಮಕ್ಕಳು ಆಸಕ್ತಿ ವಹಿಸಿ, ಕಲಿಕೆಯಲ್ಲಿ ತೊಡಗಬೇಕು. ಉತ್ತಮವಾಗಿ ಕಲಿಯುವ ಮಕ್ಕಳಿಗೆ ನಮ್ಮ ಸಹಕಾರವಿರುತ್ತದೆ ಎಂದು ಶಾಸಕಿ ಕರೆಮ್ಮ ಗೋಪಾಲಕೃಷ್ಣ ನಾಯಕ ತಿಳಿಸಿದರು.

ಪಟ್ಟಣದ ಸಾರ್ವಜನಿಕ ಕ್ಲಬ್ ಆವರಣದಲ್ಲಿ ತಾಲೂಕು ಆಡಳಿತ ಹಮ್ಮಿಕೊಂಡಿದ್ದ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಸಾಂಸ್ಕೃತಿಕ ಚಟುವಟಿಕೆಗಳಿಗೆ ಶುಕ್ರವಾರ ಚಾಲನೆ ನೀಡಿ, ಮಾತನಾಡಿದರು.

ತ್ಯಾಗ, ಬಲಿದಾನ, ನಿರಂತರ ಹೋರಾಟದ ಫಲವಾಗಿ ನಮಗೆಲ್ಲರಿಗೂ ಸ್ವಾತಂತ್ರ್ಯ ದೊರಕಿದ್ದು, ಹೋರಾಟದ ಮತ್ತು ಹೋರಾಟಗಾರರ ಇತಿಹಾಸ, ಸಂದೇಶ, ವಿಚಾರಗಳು ಯುವ ಪೀಳಿಗಿಗೆ ಸ್ಫೂರ್ತಿಯಾಗಬೇಕು. ದೇಶದಲ್ಲಿ 79 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ನಾವೆಲ್ಲರೂ ಸಡಗರ, ಸಂಭ್ರದಿಂದ ಆಚರಿಸುತ್ತಿದ್ದೇವೆ. ಆದರೆ ಸ್ವಾತಂತ್ರ ದ ಪ್ರತಿಫಲ ಸಿಕ್ಕಿದೆಯೇ ಎಂಬುದನ್ನು ನಾವೆಲ್ಲರೂ ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ. ದೇಶದ ಜನತೆಗೆ ಇನ್ನೂ ಮೂಲ ಸೌಕರ್ಯಗಳು ದೊರಕಿಲ್ಲ. ಮಹಿಳೆಯರ ಮೇಲೆ ಶೋಷಣೆ, ದೌರ್ಜನ್ಯದಂತಹ ಪ್ರಕರಣಗಳು ನಿರಂತರವಾಗಿ ಕಂಡುಬರುತ್ತವೆ.

ಕೇಂದ್ರ ಮತ್ತು ರಾಜ್ಯ ಸರಕಾರಗಳು ಜನತೆಗೆ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕಾಗಿದೆ. ಆಡಳಿತ ವ್ಯವಸ್ಥೆಯ ಜೊತೆಗೆ ಅಧಿಕಾರಿಗಳ ಸಹಕಾರ, ಪ್ರಾಮಾಣಿಕ ಸೇವೆ ಲಭ್ಯವಾದಾಗ ಮಾತ್ರ ನಿರೀಕ್ಷಿತ ಅಭಿವೃದ್ಧಿ ಕಾಣಲು ಸಾಧ್ಯ.

ಈ ನಿಟ್ಟಿನಲ್ಲಿ ನಾವೆಲ್ಲರೂ ಪ್ರಾಮಾಣಿಕ ಸೇವೆ ಮಾಡಬೇಕಾಗಿದೆ. ನಮ್ಮ ಕ್ಷೇತ್ರದಲ್ಲೂ ಅಭಿವೃದ್ಧಿಗಾಗಿ ಸಾಕಷ್ಟು ಪ್ರಯತ್ನಗಳು ಸಾಗಿವೆ. ಯುವಕರು ದೇಶಾಭಿಮಾನ ಇಟ್ಟುಕೊಂಡು ಶಾಂತಿ, ಸಹಬಾಳ್ವೆ ರೂಪಿಸಿಕೊಳ್ಳಬೇಕೆಂದು ಶಾಸಕಿ ಕರೆಮ್ಮ ಗೋಪಾಲಕೃಷ್ಣ ನಾಯಕ ತಿಳಿಸಿದರು. ಪುರಸಭೆ ಅಧ್ಯಕ್ಷೆ ಮಲ್ಲಮ್ಮ ಶಾಂತಪ್ಪ ಹೆಂಬೆರಾಳ ಅಧ್ಯಕ್ಷತೆ ವಹಿಸಿದ್ದರು.

ವಿಶೇಷ ಅಧಿಕಾರಿ ಪುರುರಾಜ್ ಸಿಂಗ್ ಸೋಳಂಕಿ ಮಾತನಾಡಿ, ಪಾಲಕರು ಶಿಕ್ಷಣದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ, ಸಮಾಜದಲ್ಲಿ ಸಭ್ಯ ನಾಗರಿಕರಾಗಿ ಉನ್ನತ ಹುದ್ದೆಗೇರುವ ಹಂಬಲ ಉಂಟುಮಾಡಬೇಕು ಎಂದರು. ಎಪಿಎಂಸಿ ಅಧ್ಯಕ್ಷ ಆದನಗೌಡ ಪಾಟೀಲ್ ಬುಂಕಲದೊಡ್ಡಿ ಮಾತನಾಡಿ, ಶಿಕ್ಷಕರು ಮಕ್ಕಳ ಕಲಿಕೆಗೆ ಪ್ರೋತ್ಸಾಹಿಸಬೇಕು. ಸರಕಾರದ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಬೇಕೆಂದರು. ಗ್ಯಾರಂಟಿ ಯೋಜನೆ ಅಧ್ಯಕ್ಷ ಲಕ್ಷಣ ಜ್ಯೋತಿ ಮಾತನಾಡಿದರು.

ಈ ಸಂದರ್ಭದಲ್ಲಿ ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಹಟ್ಟಿ, ಕ್ಷೇತ್ರ ಶಿಕ್ಷಣಾಧಿಕಾರಿ ಪಿ. ಮಹಾದೇವಯ್ಯ, ಸಿಪಿಐ ಎನ್.ವೈ.ಗುಂಡುರಾವ್, ಪುರಸಭೆ ಮುಖ್ಯಧಿಕಾರಿ ಕೆ.ಹಂಪಯ್ಯ, ಸ್ವಾತಂತ್ರ ಹೋರಾಟಗಾರ ಆದಿ ರಾಜಶೇಖರಪ್ಪರವರ ಪತ್ನಿ ಆದಿ ಕಮಲಮ್ಮ, ಪೊಲೀಸ್ ಇನ್ಸಪೆಕ್ಟರ್ ಮಂಜುನಾಥ, *2ನೇ ಪುಟಕ್ಕೆ*

## ಅರಕೇರಾ ಪಟ್ಟಣದಲ್ಲಿ 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಧ್ವಜಾರೋಹಣ ಕಾರ್ಯಕ್ರಮ

ಯುವ ಮಾರ್ಗ ಸುದ್ದಿ



**ಅರಕೇರಾ,ಆ.15–**ಪಟ್ಟಣದ ಗ್ರಾಮಪಂಚಾಯತ ಕಾರ್ಯಲಯದಲ್ಲಿ 79 ನೇ ಸ್ವಾತಂತ್ರೋತ್ಸವದ ಧ್ವಜಾರೋಹಣ ಕಾರ್ಯಕ್ರಮ ಜರುಗಿತು. ಸ್ಥಳಿಯ ಗ್ರಾಮ ಪಂಚಾಯತ ಕಾರ್ಯಲಯದಲ್ಲಿ ದ್ವಜರೋಹಣವನ್ನು ಗ್ರಾಮ ಪಂಚಾಯತಿ ಅಧ್ಯಕ್ಷರಾದ ರಂಗಮ್ಮನಾಯಕ ದ್ವಜಾರೋಹಣ ನೇರವೆರಿಸಿದರು.

ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ವೆಂಕೋಬನಾಯಕಪಿಲಿಗುಂಡ.ಉಪಾಧ್ಯಕ್ಷರಾದ ಮಲ್ಲಮ್ಮ ಪರಸಲ್ ಮುಖಂಡರುಗಳಾದ ಕೆ.ಅನಂತರಾಜನಾಯಕ.ಸತ್ಯನಾರಾಯಣ ನಾಯಕಪೋಲಿಸ್ ಪಾಟೀಲ್, ಸೀತಣ್ಣನಾಯಕಗುರಿಕಾರ, ತಿಮ್ಮಪ್ಪ ನಾಯಕಪೋಲಿಸ್ ಪಾಟೀಲ್,ಡಾಎಚ್ಎ.ನಾಡಗೌಡ. ವೆಂಕಟೇಶ ನಾಯಕದೊರೆ, ಚಂದ್ರಶೇಖರಶೆಟ್ಟಿ,ಮಲ್ಲಪ್ಪಸಾಹುಕಾರ, ಶೇಖರಪ್ಪಗೌಡಮಾಲಿಪಾಟೀಲ್, ಸಿದ್ದಾರ್ಥಹವಲ್ದಾರ,ರವಿನಾಯಕ, ನಾಗರಾಜ ಕರ್ನಾಳ, ಸೇರಿದಂತೆ ಗ್ರಾಮ ಪಂಚಾಯತ ಸರ್ವಸದಸ್ಯರುಗಳು ಭಾಗವಹಿಸಿದ್ದರು.

ಅರಕೇರಾ ಪಟ್ಟಣದ ವಿವಿಧ ಸರಕಾರಿ ,ಖಾಸಗಿ ಕಚೇರಿಗಳಲಿ ಉಪ ತಹಶೀಲ್ದಾರ ಕಾರ್ಯಲಯದಲ್ಲಿ ತಹಶೀಲ್ದಾರ ಅಮರೇಶಬೀ ರಾದಾರ ಶ್ರೀ ಸೂಗೂರೇಶ್ವರ ಯುವ ಸಂಘದಲ್ಲಿ ಚನ್ನವೀರಯ್ಯಸ್ವಾಮಿ ಹಿರೇಮಠ,ನಾಡಕಾರ್ಯಲಯ.ಸಮುದಾಯ ಆರೋಗ್ಯ ಕೇಂದ್ರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ. ಮಹಾಂತೇಶಪೂಜಾರಿ ಶ್ರೀ ಸಿದ್ದಯ್ಯ ಹವಲ್ದಾರ ಸರಕಾರಿ ಪ್ರೌಢಶಾಲೆ ,ಸರಕಾರಿ ಬಾಲಕಿಯರ ಪ್ರೌಢಶಾಲೆ ಸರಕಾರಿ ಹಿರಿಯ ಪ್ರಾಥಮಿಕ ಉರ್ದು ಶಾಲೆ,ಸಮುದಾಯ ಆರೋಗ್ಯ ಕೇಂದ್ರ, ಆದರ್ಶ ವಿದ್ಯಾಲಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಮಾಲಿಗೌಡರಓಣೆ ,ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಎಣ್ಣೆ ಬೀಜ ಬೇಳೆಗಾರರ ಸಂಘ ಅಂಚೆ ಕಛೇರಿ ಶ್ರೀಶಾರದಾ ವಿದ್ಯಸಂಸ್ಥೆಯಲ್ಲಿ ಚನ್ನಪ್ಪ ಪೈಕಾರ.ಶ್ರೀ ಭಾಗ್ಯವಂತಿ ಮಹಿಳಾ ಸಹಕಾರಿ ಬ್ಯಾಂಕ್ ನಲ್ಲಿ ಶ್ರೀದೇವಿರಾಜಶೇಖರನಾಯಕ ವಿನಾಯಕ ಶಾಲೆ ಸ್ಪಂದನ ಸೀರಿ ಬ್ಯಾಂಕಿನಲ್ಲಿ ಕಲ್ಪವೃಕ್ಷ ಬ್ಯಾಂಕಿನಲ್ಲಿ ಅಧ್ಯಕ್ಷರಾದ ಬಸವರಾಜಪೂಜಾರಿ, ಕರ್ನಾಟಕ ರಾಜ್ಯ ರಸ್ತೆ ನಿಗಮ ಬಸ್ಸನಿಲ್ದಾಣದಲ್ಲಿ ಶೇಖರಪ್ಪಗುಡಿ ಕೆ.ಹನುಮಂತ್ರಾಯನಗರ .ಬಿಸಿಎಂ.ವಸತಿನಿಲಯ.ಪರಿಶಿಷ್ಟಜಾತಿ ಪರಿಶಿಷ್ಟಪಂಗಡದವರ ಬಾಲಕಿಯರ, ಬಾಲಕರ, ಕಾಲೇಜು ವಸತಿ ನಿಲಯಗಳಲ್ಲಿ, ರೈತ ಸಂಪರ್ಕ ಕೇಂದ್ರ ಪಶುಆಸ್ಪತ್ರೆ. ವಾಲ್ಮೀಕಿ ಯುವಕ ಸಂಘದಲ್ಲಿ ದ್ವಜರೋಹಣ ಮಾಡಲಾಯಿತು.

ಯುವ ಮಾರ್ಗ

ಶನಿವಾರ : 16–08–2025

## ಮೊದಲನೇಯ ಪುಟದಿಂದ

# 79ನೇ ಸ್ವಾತಂತ್ರ್ಯೋತ್ಸವ : ಸಿಎಂ ಸಿದ್ದರಾಮಯ್ಯ ಭಾಷಣದ ಮುಖ್ಯಾಂಶಗಳು

ಧೋರಣೆ ಅನುಸರಿಸುತ್ತಿಲ್ಲ. ಐಟಿ, ಇಡಿ, ಸಿಬಿಐ ಮುಂತಾದ ಸಾಂವಿಧಾನಿಕ ಸಂಸ್ಥೆಗಳು ಪ್ರಜಾಪ್ರಭುತ್ವದ ಹಾಗೂ ಸಂವಿಧಾನದ ನೈಜ ಮೌಲ್ಯಗಳ ಉಳಿವಿಗೆ ಕಾರ್ಯ ನಿರ್ವಹಿಸುತ್ತಿಲ್ಲ ಎಂಬ ಆಕ್ರೋಶ ವಿವಿಧ ವೇದಿಕೆಗಳಿಂದ ವ್ಯಕ್ತವಾಗುತ್ತಿದೆ. ಈ ಕುರಿತು ಜವಾಬ್ದಾರಿಯುತ ನಾಗರಿಕರೆಲ್ಲಾ ದನಿ ಎತ್ತಬೇಕಿದೆ ಎಂದು ಕರೆ ನೀಡಿದರು.

ಕರ್ನಾಟಕವನ್ನು ಡ್ರಗ್ ಮುಕ್ತ ರಾಜ್ಯವನ್ನಾಗಿ ಘೋಷಿಸಬೇಕಿದೆ ಎಂದ ಅವರು, ಹೊಸ ತಲೆಮಾರು ಮೊಬೈಲ್, ಇಂಟರ್‌ನೆಟ್ ಮುಂತಾದವುಗಳಿಂದಾಗಿ ಸಂಕಷ್ಟಕ್ಕೆ ಸಿಲುಕಿದ್ದು, ಇದು ಸಾಮಾಜಿಕ ಸಮಸ್ಯೆಯಾಗುತ್ತಿದೆ. ಈ ನಿಟ್ಟಿನಲ್ಲಿ ಮೊಬೈಲ್ ಬಿಡಿ– ಪುಸ್ತಕ ಹಿಡಿ ಮತ್ತು ಓದು ಕರ್ನಾಟಕ ಎಂಬ ಕಾರ್ಯಕ್ರಮವನ್ನು ರೂಪಿಸಿದ್ದೇವೆ ಎಂದರು.

ರಸ್ತೆ ಸೇತುವೆ ಮುಂತಾದ ಮೂಲ ಸೌಕರ್ಯಗಳ ಅಭಿವೃದ್ಧಿಗೆ ಮುಖ್ಯಮಂತ್ರಿ ಮೂಲ ಸೌಕರ್ಯ ಅಭಿವೃದ್ಧಿ ಕಾರ್ಯಕ್ರಮದಡಿ 8 ಸಾವಿರ ಕೋಟಿ ರೂ. ನೀಡಲಾಗುತ್ತಿದೆ. ಕರಾವಳಿ, ಮಲೆನಾಡು ಭಾಗದಲ್ಲಿ 184 ಕಾಲುಸಂಕಗಳ ನಿರ್ಮಾಣಕ್ಕೆ 31 ಕೋಟಿ ರೂ. ವೆಚ್ಚದಲ್ಲಿ ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದರು.

**ಆರು ಲಕ್ಷ ಉದ್ಯೋಗ ಸೃಜನೆ:** ಇನ್ವೆಸ್ಟ್ ಕರ್ನಾಟಕದಲ್ಲಿ 6,23,970 ಕೋಟಿ ರೂ. ಹೂಡಿಕೆ ಒಡಂಬಡಿಕೆಯಾಗಿದ್ದು, ಆರು ಲಕ್ಷಕ್ಕೂ ಹೆಚ್ಚು ಉದ್ಯೋ?ಗ ಸೃಜನೆಯಾಗುವ ನಿರೀಕ್ಷೆಯಿದೆ. ವಿದೇಶಿ ಹೂಡಿಕೆಯಲ್ಲಿ ದೇಶದಲ್ಲೇ? 2ನೇ ಸ್ಥಾನದಲ್ಲಿ ಕರ್ನಾಟಕವಿದೆ. 2024–25ನೇ ಸಾಲಿನಲ್ಲಿ 56,30,000 ಕೋಟಿ ರೂ. ವಿದೇಶಿ ಹೂಡಿಕೆ ಆಕರ್ಷಿಸಲಾಗಿತ್ತು ಎಂದು ಹೇಳಿದರು.

ಕರ್ನಾಟಕ ಬಜೆಟ್‌ನ ಶೇ.20.1ರಷ್ಟು ಅನುದಾನವನ್ನು ಮೂಲ ಸೌಕರ್ಯ ಯೋಜನೆಗಳಿಗೆ ವಿನಿಯೋಗಿಸುತ್ತಿರುವ ಪ್ರಮುಖ ರಾಜ್ಯವಾಗಿದೆ. ಗ್ಯಾರಂಟಿ ಯೋಜನೆಗಳು ಮಹಿಳೆಯರ ಸದ್ದಿಲ್ಲದ ಛಲವನ್ನು ಕಣ್ಣಿಗೆ ಕಾಣುವ ಯಶಸ್ಸನ್ನಾಗಿ ಪರಿವರ್ತನೆ ಮಾಡುತ್ತಿವೆ. ರೈತನ ಮಗ ವಿಜ್ಞಾನಿಯಾಗಬೇಕು. ನೇಕಾರನ ಮಗಳು ಉದ್ಯಮಿಯಾಗಬೇಕು, ಪ್ರತಿ ಮಗುವಿಗೂ ಭವಿಷ್ಯ ತನ್ನ ಕೈಯಲ್ಲಿದೆ ಎಂಬ ವಾತಾವರಣ ನಿರ್ಮಿಸಬೇಕಿದೆ ಎಂದರು.

ಅನ್ನಭಾಗ್ಯ, ಶಕ್ತಿ, ಗೃಹಲಕ್ಷ್ಮಿ , ಗೃಹಜ್ಯೋ?ತಿ, ಯುವನಿಧಿ, ಗ್ಯಾರಂಟಿ ಯೋಜನೆಗಳಿಗೆ ಈವರೆಗೆ 96 ಸಾವಿರ ಕೋಟಿಗೂ ಹೆಚ್ಚು ವಿನಿಯೋಗಿಸಲಾಗಿದೆ. ಶಕ್ತಿ ಯೋಜನೆಯಲ್ಲಿ 500 ಕೋಟಿ ಟ್ರಿಪ್‌ಗಳ ಮೂಲಕ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದಾರೆ ಎಂದು ಹೇಳಿದರು. ಕರ್ನಾಟಕವು ತಲಾ ಆದಾಯದಲ್ಲಿ ಮೊದಲ ಸ್ಥಾನದಲ್ಲಿದ್ದು, ಕಳೆದ 10 ವರ್ಷಗಳಲ್ಲಿ ಶೇ.101ರಷ್ಟು ಪ್ರಗತಿ ಸಾಧಿಸಿದೆ. 2024–25ರ ವೇಳೆಗೆ ತಲಾ ಆದಾಯವು 2,04,605 ರೂ.ಗಳಿಗೆ ತಲುಪಿದೆ ಎಂದು ಹೇಳಿದರು.ಗ್ಯಾರಂಟಿ ಯೋಜನೆಗಳ ಜೊತೆಗೆ ಸಹಾಯಧನ, ಪ್ರೋ?ತ್ಸಾಹಧನ, ವಿದ್ಯಾರ್ಥಿ ವೇತನ, ಸಾಮಾಜಿಕ ಯೋಜನೆಗಳಿಗೆ 1.12 ಲಕ್ಷ ಕೋಟಿ ರೂ.ಗೂ ಹೆಚ್ಚಿನ ಹಣವನ್ನು ಜನ ಕಲ್ಯಾಣಕ್ಕಾಗಿ ಖರ್ಚು ಮಾಡಲಾಗುತ್ತಿದೆ ಎಂದರು.

ಮಹಾತಗಾಂಧಿ ಸೇರಿದಂತೆ ಸ್ವಾತಂತ್ರ್ಯ ಹೋರಾಟಕ್ಕೆ ಶ್ರಮಿಸಿದವರನ್ನು ಸರಿಸಿದ ಮುಖ್ಯಮಂತ್ರಿ, ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕರ ದಾಳಿಯಲ್ಲಿ ಮಡಿದವರು, ಭಾರತ–ಪಾಕಿಸ್ತಾನ ಸಂಘರ್ಷದಲ್ಲಿ ಹುತಾತರಾದ ಎಲ್ಲರನ್ನು ದೇಶವು ನೆನಪಿಡುತ್ತದೆ ಎಂದರು. ಕರ್ನಾಟಕ ಅಭಿವೃದ್ಧಿ ಮಾದರಿಗೆ ಮನ್ನಣೆ ದೊರೆಯುತ್ತಿರುವುದು ಹೆಮೆಯ ಸಂಗತಿಯಾಗಿದೆ. ಅಸಮಾನತೆಯನ್ನು ತಗ್ಗಿಸಲು ನಾವು ಗ್ಯಾರಂಟಿ ಯೋಜನೆಗಳನ್ನು, ಜನ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದೇವೆ ಎಂದು ಹೇಳಿದರು.

ಹಿಂದುಳಿದ ವರ್ಗಗಳ ಆಯೋಗದ ಮೂಲಕ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಮಾಡಲು ತೀರ್ಮಾನಿಸಲಾಗಿದೆ. ಪರಿಶಿಷ್ಟ ಜಾತಿಗಳಲ್ಲಿ ಒಳಮೀಸಲಾತಿ ಹಾಗೂ ಹಿಂದುಳಿದ ವರ್ಗಗಳ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗಳ ವಿಚಾರವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಎರಡು ವರ್ಷಗಳಲ್ಲಿ ರಾಜ್ಯದ ಅಭಿವೃದ್ಧಿ ಮಾದರಿಗೆ 250ಕ್ಕೂ ಹೆಚ್ಚಿನ ಪ್ರಶಸ್ತಿ ಪುರಸ್ಕಾರಗಳು ಲಭಿಸಿವೆ ಎಂದು ತಿಳಿಸಿದರು.ನಮಗೆ ಬೇಕಾಗಿರುವಷ್ಟು ಯೂರಿಯಾ ಗೊಬ್ಬರವನ್ನು ಒಕ್ಕೂಟ ಸರ್ಕಾರ ಪೂರೈಸದೆ ಸಮಸ್ಯೆಯಾಗಿದ್ದು, ಕೂಡಲೇ ಪರಿಹರಿಸಬೇಕೆಂದು ಒಕ್ಕೂಟ ಸರ್ಕಾರವನ್ನು ಒತ್ತಾಯಿಸುವುದಾಗಿ ಹೇಳಿದರು.

# ತಾಲೂಕು ಆಡಳಿತದಿಂದ ಸಂಭ್ರಮದ 79 ನೇ ಸ್ವಾತಂತ್ರ್ಯ ದಿನಾಚಾರಣೆ ಕಾರ್ಯಕ್ರಮ

ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಶಾಲೆಯ ಮಕ್ಕಳಿಂದ ಹಾಗೂ ಸ್ಕೌಟ್ಸ ಮತ್ತು ಗೈಡ್ಸ್, ಸೇವದಾಳ ಮಕ್ಕಳಿಂದ ಆಕರ್ಷಕ ಪಥಸಂಚಲನ ನಡೆಯಿತು, ನಂತರ ವಿವಿಧ ಶಾಲೆಗಳ ಮಕ್ಕಳಿಂದ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ದೇಶಭಕ್ತಿ ಗೀತೆಗಳಿಗೆ ನೃತ್ಯ ಪ್ರದರ್ಶನ ನೀಡಿದರು.

ಕಾರ್ಯಕ್ರಮದಲ್ಲಿ ಗ್ರೇಡ್2 ತಹಸೀಲ್ದಾರ್ ಅಬ್ದುಲ್ ವಾಹಿದ್,ತಾ..ಪಂ. ಇ.ಓ. ಖಾಲಿದ್ ಅಹಮ್ಮದ್ , ಪಿ.ಐ.ಸೋಮಶೇಖರ ಎಸ್.ಕೆಂಚರೆಡ್ಡಿ, ಪುರಸಭೆ ಹಿರಿಯ ಸದಸ್ಯರಾದ ರಾಜಾ ಮಹೇಂದ್ರ ನಾಯಕ ,ಲಕ್ಷ್ಮೀದೇವಿನಾಯಕ, ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್ , ತಾ.ಗ್ಯಾರಂಟಿ ಸಮಿತಿಯ ಅಧ್ಯಕ್ಷರಾದ ಬಿ.ಕೆ.ಅಮರೇಶಪ್ಪ ವಕೀಲ, ಸೈಯದ್ ಖಾಲಿದ್ ಖಾದ್ರಿ, ರಾಜಾ ಸುಭಾಷ್ ನಾಯಕ,ಸರ್ಕಾರಿ ನೌಕರರ ಸಂಘದ ತಾ.ಅಧ್ಯಕ್ಷರಾದ ಸುರೇಶಕುರ್ಡಿ, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ, ತಾ.ಆರೋಗ್ಯಾಧಿಕಾರಿ ಡಾ.ಶರಣಬಸವರಾಜ, ತಾ.ಸಮಾಜ ಕಲ್ಯಾಣ ಅಧಿಕಾರಿ ನಟರಾಜ,ತಾ.ಕೃಷಿ ಅಧಿಕಾರಿ ಗುರುನಾಥ ಭೂಸನೂರ, ಸೇರಿದಂತೆ ವಿವಿಧ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳು .ಪುರಸಭೆ ಸದಸ್ಯರು, ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು,ಜನಪ್ರತಿನಿಧಿಗಳು ಭಾಗವಹಿಸಿದರು.

# ಮಕ್ಕಳು ನಿರಂತರ ಕಲಿಕೆಯಿಂದ ಉನ್ನತ ಪದವಿಗೇರಲು ಸಾಧ್ಯ – ಕರೆಮ್ಮ ಗೋಪಾಲಕೃಷ್ಣ ನಾಯಕ

ತಾಲೂಕು ಸಮಾಜ ಕಲ್ಯಾಣಧಿಕಾರಿ ರಾಜಕುಮಾರ ಡೋಣಿ, ಪ.ಪಂ ಕಲ್ಯಾಣಧಿಕಾರಿ ಮಂಜುಳಾ ಅಸುಂಡಿ, ಕ್ಷೇತ್ರ ಸಮನ್ವಯ ಅಧಿಕಾರಿ, ಸಿಡಿಪಿಓ ಮಾಧವಾನಂದ, ಬಿಸಿಎಂ ಅಧಿಕಾರಿ ಬಾಬು, ತಾಲೂಕು ಕಸಾಪ ಅಧ್ಯಕ್ಷ ಹೆಚ್.ಶಿವರಾಜ, ಕೃಷಿ ಅಧಿಕಾರಿ ಶ್ರೀನಿವಾಸ ನಾಯಕ ಸೇರಿದಂತೆ ತಾಲೂಕು ಮಟ್ಟದ ವಿವಿಧ ಅಧಿಕಾರಿಗಳು ಭಾಗವಹಿಸಿದ್ದರು.

ತಾಲೂಕು ಕಸಾಪ ವತಿಯಿಂದ 10 ನೇ ತರಗತಿ ಮಾತೃಭಾಷೆ ಕನ್ನಡದಲ್ಲಿ ಅತಿಹೆಚ್ಚು ಅಂಕಗಳನ್ನು ಪಡೆದ ಮಕ್ಕಳಿಗೆ ಪ್ರಶಸ್ತಿ ಪತ್ರ ನೀಡಲಾಯಿತು. ಗಬ್ಬೂರಿನ ವಿದ್ಯಾಜ್ಯೋತಿ ಶಾಲಾ ಮಕ್ಕಳ ಕ್ಲಿಪಿಂಗ್ ಸೇರಿದಂತೆ ವಿವಿಧ ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು.

# ಕಲರ್ಸ್ ಕನ್ನಡ ವಾಹಿನಿಯಿಂದ ಸ್ವಾತಂತ್ರ್ಯ ದಿನಾಚರಣೆ ವಿಶೇಷ: ಮಾನ್ವಿಯ ಸರ್ವೋದಯ ಶಿಕ್ಷಣ ಸಂಸ್ಥೆಗೆ ನಟ ಚಂದನ್ ಭೇಟಿ

ಯುವ ಮಾರ್ಗ ಸುದ್ದಿ



**ಮಾನ್ವಿ,ಆ.15–** ಸ್ವಾತಂತ್ರ್ಯ ದಿನಾಚರಣೆಯ ಸಂಭ್ರಮವನ್ನು ರಾಜ್ಯಾದ್ಯಂತ ಹರಡಲು ಕಲರ್ಸ್ ಕನ್ನಡ ವಾಹಿನಿಯು ಒಂದು ವಿನೂತನ ಕಾರ್ಯಕ್ರಮದ ಅಂಗವಾಗಿ ಆಯಾ ಜಿಲ್ಲೆಗಳಲ್ಲಿ ಚಿತ್ರಕಲಾ ಸ್ಪರ್ಧೆಗಳನ್ನು ಏರ್ಪಡಿಸಿ, ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು. ಇದರ ಭಾಗವಾಗಿ, ಮಾನ್ವಿ ತಾಲ್ಲೂಕಿನ ಸರ್ವೋದಯ ಶಿಕ್ಷಣ ಸಂಸ್ಥೆಗೆ 'ಮಾಂಗಲ್ಯಂ ತಂತುನಾನೇನ' ಧಾರಾವಾಹಿಯ ಮುಖ್ಯ ನಾಯಕರಾದ ನಟ ಚಂದನ್ ಅವರು ಆಗಮಿಸಿದ್ದರು.

ಚಂದನ್ ಅವರು ಶಾಲೆಯ ವಿದ್ಯಾರ್ಥಿಗಳೊಂದಿಗೆ ಸೇರಿ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ನಂತರ, ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ತಮ್ಮ ಕೈಯಾರೆ ಬಹುಮಾನಗಳನ್ನು ವಿತರಿಸಿ, ಮಕ್ಕಳಲ್ಲಿ ಉತ್ಸಾಹ ತುಂಬಿದರು. ಈ ಸಂದರ್ಭದಲ್ಲಿ, ಸಂಸ್ಥೆಯ ಅಧ್ಯಕ್ಷರಾದ ಮನೋಜ್ ಕುಮಾರ್ ಮಿಶ್ರ ಹಾಗೂ ಕಾರ್ಯದರ್ಶಿಗಳಾದ ಅನಿಲ್ ಆಂಜನೇಯ ಅವರೊಂದಿಗೆ ಸಂಸ್ಥೆಯ ಕುರಿತು ಮಾತನಾಡಿದರು.

ಸಂಸ್ಥೆಯ ಮುಖ್ಯಸ್ಥರ ನಡುವಿನ ಸ್ನೇಹ ಸಂಬಂಧ ಮತ್ತು ಸಂಸ್ಥೆಯನ್ನು ಮುನ್ನಡೆಸುತ್ತಿರುವ ಬಗೆಯ ಬಗ್ಗೆ ತಿಳಿದು ಚಂದನ್ ಅವರು ಸಂತಸ ವ್ಯಕ್ತಪಡಿಸಿದರು. "ಈ ಕಾಲದಲ್ಲಿ ಇಂತಹ ಉತ್ತಮ ಸಂಸ್ಥೆಗಳು ಮತ್ತು ಇಂತಹ ಉತ್ತಮ ಗೆಳೆತನವನ್ನು ನೋಡಿದಾಗ ನನಗೆ ತುಂಬಾ ಸಂತೋಷವಾಯಿತು" ಎಂದು ತಮ್ಮ ಅನಿಸಿಕೆಯನ್ನು ಹಂಚಿಕೊಂಡರು.

ಈ ಕಾರ್ಯಕ್ರಮದಲ್ಲಿ ಪ್ರಚಾರದ ವಿಭಾಗದ ರೇಣುಕಾ, ಶಿವು, ನವೀನ್,ರಂಗಪ್ಪ, ಮತ್ತು ತಿಮ್ಮಾರೆಡ್ಡಿ ಸೌಕಾರ್ ಸೇರಿದಂತೆ ಶಿಕ್ಷಕರು, ಉಪನ್ಯಾಸಕರು ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಉಟಕನೂರು ಗ್ರಾ.ಪಂ. ಅಧ್ಯಕ್ಷ ಈರಮ್ಮ ತಡಕಲ್ ಧ್ವಜಾರೋಹಣ

ಯುವ ಮಾರ್ಗ ಸುದ್ದಿ



**ಮಾನ್ವಿ,ಆ.15–** ಉಟಕನೂರು ಗ್ರಾಮ ಪಂಚಾಯತ ಅಧ್ಯಕ್ಷರಾದ ಈರಮ್ಮ ಗಂಡ ಅಮರಪ್ಪ ತಡಕಲ್ ರಿಂದ ಧ್ವಜಾರೋಹಣ ಮಾಡಲಾಯಿತು.

ತಾಲೂಕಿನ ಸಮೀಪದ ಗ್ರಾಮ ಪಂಚಾಯತ್ ಕಾರ್ಯಲಯದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಈರಮ್ಮಗಂಡ ಅಮರಪ್ಪ ತಡಕಲ್ ಇವರು 79ನೇ ಸ್ವತಂತ್ರೋತ್ಸವದ ಅಂಗವಾಗಿ ಡಾಕ್ಟರ್ ಬಿ ಆರ್ ಅಂಬೇಡ್ಕರ್ ಭಾವಚಿತ್ರಕ್ಕೆ ಮತ್ತು ಗಾಂಧೀಜಿ ಅವರ ಭಾವಚಿತ್ರಕ್ಕೆ ಪೂಜೆಮಾಡಿ ಮಾಲಾರ್ಪಣೆ ನಂತರ ಧ್ವಜಾರೋಹಣವನ್ನು ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಪಂಚಾಯತ ಉಸ್ತುವಾರಿ ಬಸವರಾಜ ಪೋತ್ನಾಳ್, ಉಟಕನೂರು ಗ್ರಾಮ ಪಂಚಾಯತಿಯ ಸದಸ್ಯರಾದ ವೆಂಕಟೇಶ್ ಬೆಳವಟ, ಅಧಿಕಾರಿಗಳು ಸಿಬ್ಬಂದಿಗಳು ಹಾಗೂ ಕಂಪ್ಯೂಟರ್ ಆಪರೇಟರ್ ವಾಟರ್ ಮ್ಯಾನ್ ಗಳು ಉಪಸ್ಥಿತರಿದ್ದರು.

# ಯುವ ಸಮುದಾಯದಿಂದ ದೇಶದ ಅಭಿವೃದ್ಧಿ ಸಾಧ್ಯ : ಸಂಜೀವಕುಮಾರ ಕಂದಗಲ್



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಆ.15–** ರಾಷ್ಟ್ರದ ಅಭಿವೃದ್ಧಿಯಲ್ಲಿ ಯುವ ಸಮುದಾಯ ಹಾಗೂ ಯುವಕ ಹಾಗೂ ಯುವತಿಯರ ಪಾತ್ರ ಬಹು ಮುಖ್ಯವಾಗಿದ್ದು, ಯುವ ಜನತೆಯಿಂದ ಸದೃಢ ಭಾರತ ನಿರ್ಮಾಣ ಮಾಡಲು ಸಾಧ್ಯ ಎಂದು ಸಂಸ್ಥೆಯ ಅಧ್ಯಕ್ಷ ಸಂಜೀವಕುಮಾರ ಕಂದಗಲ್ ಅಭಿಪ್ರಾಯಪಟ್ಟರು.

ಪಟ್ಟಣದ ಶ್ರೀಮತಿ ಬಸಪ್ಪ ಗುರುಲಿಂಗಪ್ಪ ಕಾನೂನು ಮಹಾವಿದ್ಯಾಲಯದಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ದೇಶಕ್ಕೆ ಸ್ವಾತಂತ್ರ್ಯ ತಂದುಕೊಡುವುದರಲ್ಲಿ ಮಹಾತ್ಮ ಗಾಂಧೀಜಿಯವರ ಪಾತ್ರ ಸಾಕಷ್ಟು ಇದೆ ಇವರ ಜೊತೆಗೆ ಸುಭಾಷ್ ಚಂದ್ರ ಬೋಸ್, ಸರ್ದಾರ್ ವಲ್ಲಭಭಾಯಿ ಪಟೇಲ್, ಲಾಲ್ ಬಹದ್ದೂರ್ ಶಾಸ್ತ್ರಿ, ರಾಣಿ ಲಕ್ಷ್ಮೀಬಾಯಿ, ಭಗತ್ ಸಿಂಗ್, ಚಂದ್ರಶೇಖರ್ ಆಜಾದ್, ಸರೋಜಿನಿ ನಾಯ್ಡು, ಬಾಲಗಂಗಾಧರ ತಿಲಕ್, ಕಿತ್ತೂರು ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ ಹಾಗೂ ಇತರೆ ಮಹನೀಯರ ತ್ಯಾಗದ ಸಂಕೇತವೇ ಭಾರತಕ್ಕೆ ಸ್ವಾತಂತ್ರ್ಯದಕ್ಕಿದೆ, ಇಂತಹ ಸ್ವಾತಂತ್ರ ಹೋರಾಟಗಾರನ್ನ ಪ್ರತಿದಿನ ನೆನೆಯುವುದು ಅತ್ಯಂತ ಅವಶ್ಯಕ ಎಂದು ತಿಳಿಸಿದರು.

ಭಾರತ ದೇಶ ವೈವಿಧ್ಯತೆಯಿಂದ ಕೂಡಿರುವಂತಹ ದೇಶವಾಗಿದ್ದು ದೇಶ ಶೇಕಡ 50ರಷ್ಟು ಯುವ ಸಮುದಾಯದಿಂದ ತುಂಬಿದೆ, ಇದರಲ್ಲಿ ಅನೇಕ ಯುವ ಸಮುದಾಯ ದುಚ್ಚಟಗಳಿಗೆ ಬಲಿಯಾಗಿ ತಮ್ಮ ಜೀವವನ್ನು ಕಳೆದುಕೊಳ್ಳುತ್ತಿದ್ದಾರೆ, ದುಶ್ಚಟಗಳಿಗೆ ಬಲಿಯಾಗದೆ ದೇಶದಲ್ಲಿ ಉತ್ತಮ ಪ್ರಜೆಯಾಗಿ ಹಾಗೂ ಮನೆಗೆ ಉತ್ತಮ ಮಕ್ಕಳಾಗಿ ಬದುಕು ಕಟ್ಟಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ತಿಳಿಸಿದರು. ಈ ಸಂದರ್ಭದಲ್ಲಿ ಪ್ರಾಂಶುಪಾಲ ಅಮರೇಶ ಗೌಡೂರು, ಚನ್ನಬಸವ, ಅನಿಲಕುಮಾರ ಸೇರಿ ಸಿಬ್ಬಂದಿಗಳು ಇದ್ದರು.

# ಸಿಡಿಲಿನಿಂದ ಮೃತಪಟ್ಟ ಕುಟುಂಬದವರಿಗೆ ಶಾಸಕರಿಂದ ಸಾಂತ್ವನ; ರೂ.5 ಲಕ್ಷ ಪರಿಹಾರದ ಚೆಕ್ ವಿತರಣೆ

ಯುವ ಮಾರ್ಗ ಸುದ್ದಿ



**ರಾಯಚೂರು,ಆ.15–** ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಆಗಸ್ಟ್ 15ರಂದು ರಾಯಚೂರು ಗ್ರಾಮೀಣ ಕ್ಷೇತ್ರ ವ್ಯಾಪ್ತಿಯ ಯರಗೇರಾ ಗ್ರಾಮಕ್ಕೆ ಭೇಟಿ ನೀಡಿದರು.

ಗ್ರಾಮದ ಭವಾನಿ ಕುಟುಂಬದವರ ಮನೆಗೆ ತೆರಳಿ, ಸಿಡಿಲು ಬಡಿದು ಮೃತಪಟ್ಟ ಭವಾನಿ ಕುಟುಂಬದವರಿಗೆ ಶಾಸಕರು ಇದೆ ವೇಳೆ ಸಾಂತ್ವನ ಹೇಳಿದರು. ಕುಟುಂಬದ ಭವಾನಿ ಗಂಡ ನಾಗರಾಜ ಯರಗೇರಾ ಅವರಿಗೆ ಇದೆ ವೇಳೆ ಶಾಸಕರು 5 ಲಕ್ಷ ರೂ ಪರಿಹಾರ ಧನದ ಚೆಕ್ ವಿತರಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಅಧ್ಯಕ್ಷರು, ಗ್ರಾಮದ ಹಿರಿಯ ಮುಖಂಡರು, ಸುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ನಾಮ ನಿರ್ದೇಶಿತ ಸದಸ್ಯರು, ಗ್ರಾಮ ಪಂಚಾಯತ್ ಸದಸ್ಯರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಎಲ್ಲಾ ಕ್ಷೇತ್ರಗಳಲ್ಲೂ ಭಾರತ ಮಹತ್ವದ ಮೈಲುಗಲ್ಲು–ಅಶೋಕ ಪವಾರ್



ಯುವ ಮಾರ್ಗ ಸುದ್ದಿ

**ಸಿರವಾರ, ಆ.15–** ಭಾರತ ಸ್ವಾತಂತ್ರದ ನಂತರ ರಾಷ್ಟ್ರ ಹೆಮ್ಮೆ ಪಡುವಂತಹ ಅನೇಕ ಸಾಧನೆಗಳು ನಮ್ಮ ಕಣ್ಣ ಮುಂದೆ ಇವೆ, ಕೃಷಿ, ಆರೋಗ್ಯ, ರಕ್ಷಣೆ, ಸಾಮಾಜಿಕ ನ್ಯಾಯ, ಮಹಿಳಾ ಸಬಲೀಕರಣ, ಬಡತನ ನಿರ್ವಹಣೆ, ಸಾಂಸ್ಕೃತಿಕ ಐಕ್ಯತೆ, ಮೂಲಭೂತ ಸೌಕರ್ಯಗಳು, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ ಹೀಗೆ ಪ್ರತಿಯೊಂದ ಕ್ಷೇತ್ರಗಳಲ್ಲಿಯೂ ಭಾರತ ಮಹತ್ವದ ಮೈಲುಗಲ್ಲು ಸಾಧಿಸಿರುವುದು ನಾವೆ;;ಆರೂ ಹೆಮ್ಮೆಪಡುವ ಸಂಗತಿಯಾಗಿದೆ ಎಂದು ತಹಸೀಲ್ದಾರ್ ಅಶೋಕ ಪವಾರ್ ಹೇಳಿದರು.

ಶುಕ್ರವಾರ ಬೆಳಿಗ್ಗೆ ಪಟ್ಟಣದ ಸರ್ಕಾರಿ ಬಾಲಕರ ಪ್ರೌಢಶಾಲೆಯ ಆವರಣದಲ್ಲಿ ಸಿರವಾರ ತಾಲೂಕಾಡಳಿತದಿಂದ ಏರ್ಪಡಿಸಿದ್ದ 79ನೇ ಸ್ವಾತಂತ್ರ ದಿನಾಚರಣೆ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ನಂತರ ಅವರು ಮಾತನಾಡಿದರು, ದೇಶಕ್ಕೆ ಸ್ವಾತಂತ್ರ ಸಿಕ್ಕು ಇಂದಿಗೆ 79 ವರ್ಷಗಳು ಗತಿಸುತ್ತಿವೆ ಇಂತಹ ಶುಭ ಗಳಿಗೆಗೆ ದೇಶದ ಅನೇಕ ಮಹನೀಯರ ಪ್ರಾಣ, ಬಲಿದಾನದ ಫಲವಾಗಿದ್ದು ಅಂತಹ ಮಹನೀಯರ ಸ್ಮರಣೆ ಮಾಡಿಕೊಳ್ಳುವ ಅಗತ್ಯತೆ ಇದೆ, ಇಂದು ಭಾರತ ದೇಶವು ಜಗತ್ತಿನಲ್ಲಿಯೇ ಅತ್ಯಂತ ವೇಗದ ಆರ್ಥಿಕ ಪ್ರಗತಿಯನ್ನು ಹೊಂದುತ್ತಿರುವ ರಾಷ್ಟ್ರಗಳ ಪಟ್ಟಿಯಲ್ಲಿ 4ನೇ ಸ್ಥಾನದಲ್ಲಿದೆ ಆದರೂ ದೇಶದಲ್ಲಿ ಇನ್ನೂ ಬಡತನ, ಹಸಿವು, ಆರೋಗ್ಯ, ಭ್ರಷ್ಟಚಾರ, ಜಾತಿ ವ್ಯವಸ್ಥೆ, ಕೋಮುವಾದ ಪ್ರಾದೇಶಿಕ ಅಸಮಾನತೆ, ಲಿಂಗ ತಾರತಮ್ಯ, ಧಾರ್ಮಿಕ ಅಹಿ ಷ್ಣುತೆ ಹೀಗೆ ದೇಶದ ಅಬಿ, ವೃದ್ಧಿಗೆ ಮಾರಕವಾಗಿರುವ ಅನೇಕ ಸಂಗತಿಗಳು ನಮ್ಮ ಕಣ್ಣೆದುರುಗಿವೆ ಇಂತಹ ಎಲ್ಲಾ ಪ್ರಗ 'ತಿಗೆ ಮಾರಕವಾಗಿರುವ ಸಂಗ 'ತಿಗಳನ್ನು ತೊಡೆದು ಹಾಕಲು ನಮಗಿರೋ ಅಸ್ತ್ರ ಶಿಕ್ಷಣ ಮತ್ತು ಜ್ಞಾನ ಪ್ರತಿಯೊ ಬ್ಬರೂ ಶಿಕ್ಷಣ, ಜ್ಞಾನ ಪಡೆ ಯದೇ ಹೊರತು ದೇಶದ ಏಳಿಗೆ ಸಾಧ್ಯವಿಲ್ಲ ಎಂದರು.ಇದೇ ವೇಳೆ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿ ಸಲಾಯಿತು. ಈ ಸಂದರ್ಭದಲ್ಲಿ ಪ.ಪಂ. ಅಧ್ಯಕ್ಷರಾದ ವೈ.ಭೂ ಪನಗೌಡ, ಉಪಾಧ್ಯಕ್ಷೆ ಲಕ್ಷ್ಮೀ ಆದೆಪ್ಪ, ತಾ.ಪಂ. ಇಓ ಶಶಿಧರ ಸ್ವಾಮಿ, ಸಿಪಿಐ ಶಶಿಕಾಂತ ಎಂ, ಶಿಶಿ ಅಭಿವೃದ್ಧಿ ಯೋಜನಾಧಿ ಕಾರಿ ಗೋಕುಲಸಾಬ, ನೀರಾ ವರಿ ಇಲಾಖೆಯ ಎಇಇ ವಿಜಯಲಕ್ಷ್ಮೀ ಪಾಟೀಲ್, ಪ.ಪಂ. ಮುಖ್ಯಾಧಿಕಾರೊ ಸುರೇಶ ಶೆಟ್ಟಿ, ಸರ್ಕಾರಿ ನೌಕರರ ಸಂಘದ ತಾಲೂಕ ಅಧ್ಯಕ್ಷ ಆರೀಫ್ ಮೀಯಾ ಸೇರಿದಂತೆ ವಿವಿಧ ಅಧಿಕಾರಿಗಳು, ಶಿಕ್ಷಕರು, ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಯುವ ಮಾರ್ಗ



# ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಯಚೂರಿನಲ್ಲಿ ಟ್ರಾಮಾ ಕೇರ್ ಸೆಂಟರ್‌ಗೆ ಚಾಲನೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.15–** ಇಲ್ಲಿನ ರಾಜೀವ್ ಗಾಂಧಿ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಯ ಆವರಣದಲ್ಲಿ ಟ್ರಾಮಾ ಕೇರ್ ಸೆಂಟರ್‌ಗೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ಆರ್ ಪಾಟೀಲ್ ಅವರು ಆಗಸ್ಟ್ 15ರಂದು ಚಾಲನೆ ನೀಡಿದರು.

ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಗ್ಗೆ ಜಿಲ್ಲಾಡಳಿತದಿಂದ ನಡೆದ ಸ್ವಾತಂತ್ರ್ಯ?? ದಿನೋತ್ಸವದ ರಾಷ್ಟ್ರಧ್ವಜಾರೋಹಣ ನೆರವೇರಿಸಿದ ಬಳಿಕ ಸಚಿವರು, ಒಪೆಕ್ ಆಸ್ಪತ್ರೆಯ ಆವರಣಕ್ಕೆ ತೆರಳಿ ಟ್ರಾಮಾ ಕೇರ್ ಸೆಂಟರ್ ಉದ್ಘಾಟನಾ ಸಮಾರಂಭದಲ್ಲಿ ಭಾಗಿಯಾದರು.

ಇದೆ ವೇಳೆ ಸಚಿವರು, ಆಸ್ಪತ್ರೆಯ ಕಚೇರಿಗೆ ತೆರಳಿ ಟ್ರಾಮಾ ಕೇರ್ ಸೆಂಟರ್ ಕಾರ್ಯಯೋಜನೆಯ ಬಗ್ಗೆ ಟ್ರಾಮಾ ಕೇರ್ ಸೆಂಟರ್ ವಿಶೇಷಾಧಿಕಾರಿ ಡಾ.ಬಾಲಾಜಿ ಪೈ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರಾದ ಡಾ. ರಮೇಶ್ ಬಿ. ಹೆಚ್., ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ವಿಶೇಷಾಧಿಕಾರಿ ಡಾ.ರಮೇಶ್ ಸಿ. ಸಾಗರ್, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಗುರುಸಿದ್ದಯ್ಯ ಹಿರೇಮಠ, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆರ್ಥಿಕ ಅಧಿಕಾರಿ ಹನುಮೇಶ ಸೇರಿದಂತೆ ಇತರರೊಂದಿಗೆ ಕೆಲಹೊತ್ತು ಚರ್ಚಿಸಿದರು.

ಇದೆ ಸಂದರ್ಭದಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರಾದ ಡಾ.ಬಿ.ಎಲ್.ಸುಜಾತ ರಾಥೋಡ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಇನ್ನಿತರ ಅಧಿಕಾರಿಗಳು, ವೈದ್ಯಾಧಿಕಾರಿಗಳು, ತಜ್ಞ ವೈದ್ಯರು, ವೈದ್ಯರು, ಸಿಬ್ಬಂದಿ ಉಪಸ್ಥಿತರಿದ್ದರು.

# ಧರ್ಮಸ್ಥಳದ ವಿರುದ್ಧ ನಡೆದಿರುವ ಷಡ್ಯಂತ್ರ ಮುಂದಿನ ದಿನಗಳಲ್ಲಿ ಹೊರಬರಲಿದೆ : ಡಿಕೆಶಿ

**ಬೆಂಗಳೂರು, ಆ.15–** ತಪ್ಪು ಮಾಡಿದವರನ್ನು ರಕ್ಷಿಸುವುದಿಲ್ಲ. ಧರ್ಮಸ್ಥಳ ವಿಚಾರದಲ್ಲಿ ಪರವಿರೋಧ ಎನ್ನುವುದಕ್ಕಿಂತಲೂ ನ್ಯಾಯ ದೊರೆಯಬೇಕೆಂಬುದು ಸರ್ಕಾರದ ಆಶಯವಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳವನ್ನು ನಾನು ಹತ್ತಿರದಿಂದ ನೋಡಿದ್ದೇನೆ. ಅಲ್ಲಿನ ಭಕ್ತಿ ಹಾಗೂ ಶ್ರದ್ಧೆಗಳ ಬಗ್ಗೆ ಅರಿವಿದೆ. ಧರ್ಮಸ್ಥಳದ ವಿರುದ್ಧ ನಡೆದಿರುವ ಷಡ್ಯಂತ್ರ ಮುಂದಿನ ದಿನಗಳಲ್ಲಿ ಹೊರಬರಲಿದೆ ಎಂದರು.

ವಿಧಾನಸಭೆಯಲ್ಲಿ ನಡೆದಿರುವ ಚರ್ಚೆಗೆ ಗೃಹಸಚಿವ ಡಾ.ಜಿ.ಪರಮೇಶ್ವರ್ ಸೋಮವಾರ ಉತ್ತರ ನೀಡಲಿದ್ದು, ನಾಡಿನ ಜನರಿಗೆ ಸತ್ಯ ತಿಳಿಸಲಿದ್ದಾರೆ. ನಾನು ಅವರೊಂದಿಗೆ ಚರ್ಚೆ ಮಾಡಿ ಒಂದಿಷ್ಟು ವಿಚಾರಗಳನ್ನು ಹೇಳಿದ್ದೇನೆ ಎಂದರು.

ಧಾರ್ಮಿಕ ಸ್ಥಳಗಳ ಬಗ್ಗೆ ಸುಳ್ಳು, ಷಡ್ಯಂತ್ರ, ಅಪಮಾನ, ಅಪಚಾರಗಳ ವಿರುದ್ಧ ಮುಖ್ಯಮಂತ್ರಿ ಅವರು ನಿಲುವು ಹೊಂದಿದ್ದಾರೆ. ಶಾಸಕಾಂಗ ಸಭೆಯಲ್ಲಿ ಈ ಬಗ್ಗೆ ತಮಗೆಲ್ಲ



ಮುಖ್ಯಮಂತ್ರಿ ಅವರು ಸೂಚನೆ ನೀಡಿದ್ದಾರೆ.

ಆರೋಪಗಳು ಸುಳ್ಳಾಗಿದ್ದರೆ, ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ದೊಡ್ಡ ಚಿಂತನೆಯಾಗಿದೆ. ಕಾನೂನಿಕ್ಕಿಂತ ಯಾರೂ ದೊಡ್ಡವರಲ್ಲ. ಕಾನೂನು ಪಾಲನೆ ನಮ್ಮೆಲ್ಲರ ಹೊಣೆಗಾರಿಕೆ. ಆದರೆ ಅನಗತ್ಯವಾಗಿ ಅರೋಪ ಮಾಡಿದರೆ ಸಹಿಸುವುದಿಲ್ಲ. ಇಲ್ಲಿ ಯಾರನ್ನೂ ರಕ್ಷಿಸುವುದಿಲ್ಲ ಎಂದು ಹೇಳಿದರು.

# ನಮ್ಮದೇ ಬಾಹ್ಯಾಕಾಶ ನಿಲ್ದಾಣ ನಿರ್ಮಿಸುತ್ತೆವೆ : ಪ್ರಧಾನಿ ಮೋದಿ

**ನವದೆಹಲಿ, ಆ.15–** ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತ ಸ್ವಾವಲಂಬಿಯಾಗುವತ್ತ ಕೆಲಸ ಮಾಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.ನಮ್ಮ ಬಾಹ್ಯಾಕಾಶ ಕ್ಷೇತ್ರದ ಬಗ್ಗೆ ದೇಶಕ್ಕೆ ಹೆಮ್ಮೆಯಿದೆ, ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಬಾಹ್ಯಾಕಾಶ ಕೇಂದ್ರದಿಂದ ಹಿಂತಿರುಗಿದ್ದಾರೆ. ಮುಂದಿನ ದಿನಗಳಲ್ಲಿ ಅವರು ಭಾರತಕ್ಕೆ ಹಿಂತಿರುಗುತ್ತಾರೆ ಎಂದು ಪ್ರಧಾನಿ ಮೋದಿ ಕೆಂಪು ಕೋಟೆಯಿಂದ ರಾಷ್ಟ್ರವನ್ನುದ್ದೇಶಿಸಿ ಮಾಡಿದ ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಹೇಳಿದರು.

ಭಾರತ ಬಾಹ್ಯಾಕಾಶ ವಲಯದಲ್ಲೂ ಸ್ವಾವಲಂಬಿಯಾಗುವತ್ತ ಕೆಲಸ ಮಾಡುತ್ತಿದೆ ಮತ್ತು ಗಗನ್ ಯಾನ್ ಉಡಾವಣೆಗೆ ಸಿದ್ಧತೆ ನಡೆಸುತ್ತಿದೆ ಎಂದು ಅವರು ಹೇಳಿದರು.ಗಗನ್‌ಯಾನ್ ಭಾರತದ ಪ್ರಮುಖ ಮಾನವ ಬಾಹ್ಯಾಕಾಶ ಹಾರಾಟ ಕಾರ್ಯಕ್ರಮವಾಗಿದೆ.ನಾವು ನಮ್ಮದೇ ಆದ ಬಾಹ್ಯಾಕಾಶ ನಿಲ್ದಾಣವನ್ನು ನಿರ್ಮಿಸುತ್ತೆವೆ ಎಂದು ಅವರು ಹೇಳಿದರು.

ಇತ್ತಿಚಿನ ದಿನಗಳಲ್ಲಿ ತಂದ ಸುಧಾರಣೆಗಳು ಬಾಹ್ಯಾಕಾಶ ವಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ 300 ಕ್ಕೂ ಹೆಚ್ಚು ಸ್ಟಾರ್ಟ್–ಅಪ್‌ಗಳನ್ನು ಸಕ್ರಿಯಗೊಳಿಸಿವೆ ಎಂದು ಪ್ರಧಾನಿ ಹೇಳಿದರು.ಸಾವಿರಾರು ಯುವಕರು ಇದರಲ್ಲಿ ಕೆಲಸ ಮಾಡುತ್ತಿದ್ದಾರೆ. ಇದು ನಮ್ಮ ಯುವಕರ ಶಕ್ತಿ ಇದು ನಮ್ಮ ಯುವಕರ ಮೇಲೆ ನಾವು ಹೊಂದಿರುವ ವಿಶ್ವಾಸ ಎಂದು ಅವರು ಹೇಳಿದರು.

# ಸ್ವಾತಂತ್ರ್ಯ ದಿನಚಾರಣೆ ಸಂಧರ್ಭದಲ್ಲಿ ದೇಶದ ಯುವಕರಿಗೆ ಶುಭ ಸುದ್ದಿ ನೀಡಿದ ಪ್ರಧಾನಿ ಮೋದಿ

**ನವದೆಹಲಿ,ಆ.15–** ಸ್ವಾತಂತ್ರ್ಯ ದಿನಚಾರಣೆಯ ಹಿನ್ನಲೆಯಲ್ಲಿ ದೇಶದ ಯುವಕರಿಗೆ ಶುಭ ಸುದ್ದಿ ನೀಡಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಪ್ರಧಾನಮಂತ್ರಿ ವಿಕ್ಷಿತ್ ಭಾರತ್ ರೋಜ್ಗಾರ್ ಯೋಜನೆಯನ್ನು ಘೋಷಿಸಿದ್ದು, ಖಾಸಗಿ ವಲಯದಲ್ಲಿ ಮೊದಲ ಉದ್ಯೋಗ ಪಡೆಯುವವರಿಗೆ ಕೇಂದ್ರದಿಂದ 15,000 ರೂ.ಗಳನ್ನು ನೀಡಲಾಗುವುದು ಎಂದು ಪ್ರಕಟಿಸಿದ್ದಾರೆ.

79ನೇ ಸ್ವಾತಂತ್ರ್ಯ ದಿನದಂದು ದೆಹಲಿಯ ಐತಿಹಾಸಿಕ ಕೆಂಪುಕೋಟೆಯ ಮೇಲೆ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಅವರು, 1 ಲಕ್ಷ ಕೋಟಿ ರೂಪಾಯಿಗಳ ಈ ಯೋಜನೆ ತಕ್ಷಣದಿಂದ ಜಾರಿಗೆ ಬರಲಿದೆ. ಈ ಯೋಜನೆಯು 3.5 ಕೋಟಿಗೂ ಹೆಚ್ಚು ಜನರಿಗೆ ಪ್ರಯೋಜನವನ್ನು ನೀಡುತ್ತದೆ ಎಂದರು.

ಇಂದು ಆಗಸ್ಟ್ 15, ಇಂದೇ ನನ್ನ ದೇಶದ ಯುವಕರಿಗೆ 1 ಲಕ್ಷ ಕೋಟಿ ಮೊತ್ತದ ಯೋಜನೆ ಜಾರಿಗೊಳಿಸುತ್ತಿದ್ದೇವೆ. ಇಂದಿನಿಂದ ಪ್ರಧಾನಮಂತ್ರಿ ವಿಕ್ಷಿತ್ ಭಾರತ್ ರೋಜ್‌ಗಾರ್ ಯೋಜನೆ ಜಾರಿಯಾಗುತ್ತಿದೆ. ಇದರಡಿ ಪ್ರೈವೆಟ್ ಸೆಕ್ಟರ್‌ನಲ್ಲಿ ಮೊದಲ ಉದ್ಯೋ?ಗ ಪಡೆದುಕೊಳ್ಳುವವರಿಗೆ ಸರ್ಕಾರದ ವತಿಯಿಂದ 15 ಸಾವಿರ ರೂ. ನೀಡಲಾಗುವುದು. ಇನ್ನು ಹೆಚ್ಚು ಹೊಸ ಉದ್ಯೋಗ ಸೃಷ್ಟಿಸಿ ಅವಕಾಶ ನೀಡಲಾಗುವುದು ಎಂದು ಹೇಳಿದರು.

3.5 ಕೋಟಿ ಯುವಕರಿಗೆ ಉದ್ಯೋಗಾವಕಾಶ: ಪ್ರಧಾನಮಂತ್ರಿ ವಿಕಾಸಿತ್ ಭಾರತ್ ರೋಜ್‌ಗಾರ್ ಯೋಜನೆಯು ಯುವಕರಿಗೆ ಹೊಸ ಕ್ಷೇತ್ರಗಳಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯು ದೇಶದ ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸುವುದರ ಜೊತೆಗೆ, ಯುವಕರಿಗೆ ಸ್ವಾವಲಂಬನೆಯ ದಾರಿಯನ್ನು ತೆರೆಯಲಿದೆ. ಈ ಯೋಜನೆಯ ಮೂಲಕ ಸುಮಾರು 3.5 ಕೋಟಿ ಯುವಕರಿಗೆ ಉದ್ಯೋಗಾವಕಾಶ ಸೃಷ್ಟಿಸಲಾಗುವುದು ಎಂದರು.

ಈ ಘೋಷಣೆಯು ದೇಶದ ಯುವಜನರಲ್ಲಿ ಹೊಸ ಆಶೆಯನ್ನು ಮೂಡಿಸಿದ್ದು, ಭಾರತದ ಯುವಶಕ್ತಿಯ ಸಾಮರ್ಥ್ಯವನ್ನು ಎತ್ತಿಹಿಡಿಯುವ ಸಂದೇಶವಾಗಿದೆ. ರೈತರು, ಮಹಿಳೆಯರು, ಮತ್ತು ಮಧ್ಯಮ ವರ್ಗದವರ ಜೊತೆಗೆ ಯುವಕರಿಗೆ ಸಶಕ್ತಿಕರಣದ ಮೂಲಕ ಭಾರತದ ಆರ್ಥಿಕತೆಯನ್ನು ಜಾಗತಿಕವಾಗಿ ಬಲಪಡಿಸುವ ಜೊತೆಗೆ, ಯುವಕರಿಗೆ ಉಜ್ವಲ ಭವಿಷ್ಯ ನೀಡಲಿದೆ ಎಂದು ಹೇಳಿದರು.

ಪ್ರಧಾನಿ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟವು ಉದ್ಯೋಗ–ಸಂಬಂಧಿತ ಪ್ರೋತ್ಸಾಹಕ (ಇಎಲ್‌ಐ) ಯೋಜನೆಯನ್ನು ಅನುಮೋದಿಸಿದೆ ಎಂದು ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಕಳೆದ ತಿಂಗಳಷ್ಟೆ ತಿಳಿಸಿತ್ತು.

ಜುಲೈ 25ರಂದು ಬಿಡುಗಡೆಯಾದ ಹೇಳಿಕೆಯಲ್ಲಿ, ಪ್ರಧಾನ ಮಂತ್ರಿ ವಿಕ್ಷಿತ್ ಭಾರತ್ ರೋಜ್‌ಗಾರ್ ಯೋಜನೆ ಎರಡು ವರ್ಷಗಳಲ್ಲಿ 3.5 ಕೋಟಿಗೂ ಹೆಚ್ಚು ಉದ್ಯೋಗಗಳನ್ನು ಸೃಷ್ಟಿಸಲು ಪ್ರೋತ್ಸಾಹಿಸುವ ಗುರಿ ಹೊಂದಿದ್ದು, ಈ ಪೈಕಿ 1.92 ಕೋಟಿ ಫಲಾನುಭವಿಗಳು ಮೊದಲ ಬಾರಿಗೆ ಉದ್ಯೋ?ಗಕ್ಕೆ ಸೇರುವವರಾಗಿರುತ್ತಾರೆ ಎಂದು ಹೇಳಿದೆ. ಈ ಹೆಸರು ವಿಕ್ಷಿತ್ ಭಾರತ್ ಉಪಕ್ರಮದ ಕಡೆಗೆ ಯೋಜನೆಯ ಒಟ್ಟಾರೆ ಉದ್ದೇಶಗಳಿಗೆ ಹೊಂದಿಕೆಯಾಗುತ್ತದೆ ಮತ್ತು ದೇಶದಲ್ಲಿ ಸಮಗ್ರ ಮತ್ತು ಸುಸ್ಥಿರ ಉದ್ಯೋ?ಗಾವಕಾಶಗಳನ್ನು ಸೃಷ್ಟಿಸುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ.

**ಉದ್ಯೋಗದಾತರಿಗೆ ಬೆಂಬಲ** :ಈ ಯೋಜನೆಯು ಎರಡು ಭಾಗಗಳನ್ನು ಒಳಗೊಂಡಿದೆ, ಭಾಗ ಎ ಮೊದಲ ಬಾರಿಗೆ ಕೆಲಸ ಮಾಡುವವರ ಮೇಲೆ ಕೇಂದ್ರಿಕೃತವಾಗಿದೆ ಮತ್ತು ಭಾಗ ಬಿ ಉದ್ಯೋಗದಾತರ ಮೇಲೆ ಕೇಂದ್ರಿ?ಕೃತವಾಗಿದೆ. ಉದ್ಯೋಗಿಗಳ ಭವಿಷ್ಯನಿಧಿ ಸಂಸ್ಥೆ(ಇಪಿಎಫ್‌ಒ)ಯಲ್ಲಿ ನೋಂದಾಯಿಸಿಕೊಂಡ ಮೊದಲ ಬಾರಿಗೆ ಉದ್ಯೋಗಿಗಳನ್ನು ಗುರಿಯಾಗಿಸಿಕೊಂಡು, ಭಾಗ ಎ ಒಂದು ತಿಂಗಳ ಇಪಿಎಫ್ ವೇತನವನ್ನು ಎರಡು ಕಂತುಗಳಲ್ಲಿ 15,000 ರೂ.ಗಳವರೆಗೆ ನೀಡುತ್ತದೆ.

1 ಲಕ್ಷ ರೂ.ವರೆಗೆ ಸಂಬಳ ಪಡೆಯುವ ಉದ್ಯೋಗಿಗಳು ಅರ್ಹರಾಗಿರುತ್ತಾರೆ. ಮೊದಲ ಕಂತನ್ನು ಆರು ತಿಂಗಳ ಸೇವೆಯ ನಂತರ ಪಾವತಿಸಲಾಗುವುದು ಮತ್ತು ಎರಡನೇ ಕಂತನ್ನು 12 ತಿಂಗಳ ಸೇವೆಯ ನಂತರ ಮತ್ತು ಉದ್ಯೋಗಿ ಆರ್ಥಿಕ ಸಾಕ್ಷರತಾ ಕಾರ್ಯಕ್ರಮವನ್ನು ಪೂರ್ಣಗೊಳಿಸಿದ ನಂತರ ಪಾವತಿಸಲಾಗುವುದು.ಉಳಿತಾಯ ಅಭ್ಯಾಸವನ್ನು ಉತ್ತೇಜಿಸಲು, ಪ್ರೋತ್ಸಾಹದ ಒಂದು ಭಾಗವನ್ನು ಉಳಿತಾಯ ಸಾಧನ ಅಥವಾ ಠೇವಣಿ ಖಾತೆಯಲ್ಲಿ ನಿಗದಿತ ಅವಧಿಗೆ ಇಡಲಾಗುತ್ತದೆ ಮತ್ತು ನಂತರದ ದಿನಾಂಕದಂದು ಉದ್ಯೋಗಿ ಅದನ್ನು ಹಿಂಪಡ 'ಯಬಹುದು ಎಂದು ಸಚಿವಾಲಯ ತಿಳಿಸಿದೆ.ಮೊದಲ ಬಾರಿಗೆ ಉದ್ಯೋಗಿಗಳಿಗೆ ಎಲ್ಲಾ ಪಾವತಿಗಳನ್ನು ಆಧಾರ್ ಬ್ರಿಡ್ಜ್ ಪಾವತಿ ವ್ಯವಸ್ಥೆ ಬಳಸಿಕೊಂಡು ನೇರ ಪ್ರಯೋಜನ ವರ್ಗಾವಣೆ ವಿಧಾನದ ಮೂಲಕ ಮಾಡಲಾಗುತ್ತದೆ.

ಭಾಗ ಬಿ ಎಲ್ಲಾ ವಲಯಗಳಲ್ಲಿ ಹೆಚ್ಚುವರಿ ಉದ್ಯೋಗ ಸೃಷ್ಟಿಯನ್ನು ಒಳಗೊಳ್ಳುತ್ತದೆ, ಉತ್ಪಾದನಾ ವಲಯದ ಮೇಲೆ ವಿಶೇಷ ಗಮನ ಹರಿಸಲಾಗುತ್ತದೆ. 1 ಲಕ್ಷ ರೂ.ವರೆಗಿನ ಸಂಬಳ ಪಡೆಯುವ ಉದ್ಯೋಗಿಗಳಿಗೆ ಸಂಬಂಧಿಸಿದಂತೆ ಉದ್ಯೋಗದಾತರು ಪ್ರೋತ್ಸಾಹ ಧನವನ್ನು ಪಡೆಯುತ್ತಾರೆ. ಕನಿಷ್ಠ ಆರು ತಿಂಗಳ ಕಾಲ ನಿರಂತರ



ಉದ್ಯೋಗ ಹೊಂದಿರುವ ಪ್ರತಿ ಹೆಚ್ಚುವರಿ ಉದ್ಯೋಗಿಗೆ ಎರಡು ವರ್ಷಗಳವರೆಗೆ ಕೇಂದ್ರವು ಉದ್ಯೋಗದಾತರಿಗೆ ತಿಂಗಳಿಗೆ ರೂ 3,000 ವರೆಗೆ ಪ್ರೋತ್ಸಾಹ ಧನ ನೀಡುತ್ತದೆ. ಉತ್ಪಾದನಾ ವಲಯಕ್ಕೆ, ಪ್ರೋತ್ಸಾಹ ಧನವನ್ನು ಮೂರನೇ ಮತ್ತು ನಾಲ್ಕನೇ ವರ್ಷಗಳವರೆಗೆ ವಿಸ್ತರಿಸಲಾಗುವುದು.

ಇಪಿಎಫ್‌ಒದಲ್ಲಿ ನೋಂದಾಯಿಸಲಾದ ಸಂಸ್ಥೆಗಳು ಕನಿಷ್ಠ ಆರು ತಿಂಗಳವರೆಗೆ ನಿರಂತರ ಆಧಾರದ ಮೇಲೆ ಕನಿಷ್ಠ ಇಬ್ಬರು ಹೆಚ್ಚುವರಿ ಉದ್ಯೋಗಿಗಳನ್ನು (50 ಕ್ಕಿಂತ ಕಡಿಮೆ ಉದ್ಯೋಗಿಗಳನ್ನು ಹೊಂದಿರುವ ಉದ್ಯೋಗದಾತರಿಗೆ) ಅಥವಾ ಐದು ಹೆಚ್ಚುವರಿ ಉದ್ಯೋಗಿಗಳನ್ನು (50 ಅಥವಾ ಅದಕ್ಕಿಂತ ಹೆಚ್ಚಿನ ಉದ್ಯೋಗಿಗಳನ್ನು ಹೊಂದಿರುವ ಉದ್ಯೋಗದಾತರಿಗೆ) ನೇಮಿಸಿಕೊಳ್ಳಬೇಕಾಗುತ್ತದೆ ಎಂದು ಸಚಿವಾಲಯ ತಿಳಿಸಿದೆ.

# ಸ್ವಾತಂತ್ರ್ಯೋತವದಲ್ಲಿ ಆಪರೇಷನ್ ಸಿಂಧೂರ್ ಹೈಲೈಟ್

**ನವದೆಹಲಿ, ಆ. 15 –** ಆಪರೇಷನ್ ಸಿಂಧೂರ್‌ನ ಯಶಸ್ಸುಕೆಂಪು ಕೋಟೆ ಸಂಕೀರ್ಣದಲ್ಲಿ ನಿರ್ಣಾಯಕ ಸ್ಫೂರ್ತಿಯಾಗಿ ಹೊರಹೊಮ್ಮಿ ದೆ.79 ನೇ ಸ್ವಾತಂತ್ರ್ಯ ದಿನಾಚರಣೆಯ ಭಾಗವಾಗಿ ಭಾರತದ ನಿರ್ಣಾಯಕ ಮಿಲಿಟರಿ ಕಾರ್ಯಾಚರಣೆಗೆ ಮೀಸಲಾದ ವಿಶೇಷ ಕಲಾಕೃತಿಗಳನ್ನು ಇಲ್ಲಿ ಪ್ರದರ್ಶಿಸಲಾಗುತ್ತಿದೆ.ಏಪ್ರಿಲ್ 22 ರ ಪಹಲ್ಗಾಮ್ ದಾಳಿಯ ಸೇಡು ತೀರಿಸಿಕೊಳ್ಳಲು ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಒಕೆ) ದಲ್ಲಿನ ಬಹು ಭಯೋತ್ಪಾದಕ ಮೂಲಸೌಕರ್ಯಗಳನ್ನು ನಾಶಮಾಡಲು ಭಾರತೀಯ ಸಶಸ್ತ್ರ ಪಡೆಗಳು 100 ದಿನಗಳ ಹಿಂದೆ ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿದವು.

ರಾಷ್ಟ್ರವು ಸ್ವಾತಂತ್ರ್ಯ ದಿನವನ್ನು ಆಚರಿಸುತ್ತಿರುವಾಗ, ಮಿಲಿಟರಿ ಕಾರ್ಯಾಚರಣೆಯ ಯಶಸ್ಸು ಮತ್ತು ವಿಕಸಿತ್ ಭಾರತ ಮಾಡುವ ದೃಷ್ಟಿಕೋನವು ಸ್ಥಳದಲ್ಲಿ ನಿರ್ಣಾಯಕ ಮನಸ್ಥಿತಿಯಾಗಿದೆ.ಇದಲ್ಲದೆ, ಭವ್ಯ ಕಾರ್ಯಕ್ರಮಕ್ಕೆ ಹಾಜರಾಗುವ ಅತಿಥಿಗಳಿಗೆ ನೀಡಲಾದ ಅಧಿಕೃತ ಆಮಂತ್ರಣ ಪತ್ರಗಳು ಕಾರ್ಯಾಚರಣೆಯ ಲೋಗೋ ಮತ್ತು ನಯ ಭಾರತದ ಉದಯವನ್ನು ಚಿತ್ರಿಸುವ ಎಂಜಿನಿಯರಿಂಗ್ ಐಕಾನ್ ಆಗಿರುವ ಐಕಾನಿಕ್ ಚೆನಾಬ್ ಸೇತುವೆಯ ಛಾಯಾಚಿತ್ರವನ್ನು ಹೊಂದಿವೆ.ಇ–ಆಹ್ವಾನ ಪತ್ರವು ಭಾರತದ ಸಂವಿಧಾನದಲ್ಲಿ ಪ್ರತಿಪಾದಿಸಲಾದ ನಾಗರಿಕನ ಮೂಲಭೂತ ಕರ್ತವ್ಯಗಳ ಪಟ್ಟಿಯನ್ನು ಸಹ ಹೊಂದಿದೆ.2047 ರ ವೇಳೆಗೆ ಸರ್ಕಾರದ ವಿಕಸಿತ್ ಭಾರತ್ ದೃಷ್ಟಿಕೋನವನ್ನು ಸಾಕಾರಗೊಳಿಸುವತ್ತ ದೇಶವು ಬೃಹತ್ ಹೆಜ್ಜೆಗಳನ್ನು ಇಡುತ್ತಿರುವುದರಿಂದ, ಈ ವರ್ಷದ ಆಚರಣೆಯ ವಿಷಯ ನಯ ಭಾರತವಾಗಿದೆ. ಈ ಆಚರಣೆಗಳು ಸಮೃದ್ಧ, ಸುರಕ್ಷಿತ ಮತ್ತು ದಿಟ್ಟ ಟಿ"ನಯ ಭಾರತಟಿ"ದ ನಿರಂತರ ಉದಯವನ್ನು ಸ್ಮರಿಸಲು ಮತ್ತು ಪ್ರಗತಿಯ ಹಾದಿಯಲ್ಲಿ ಮತ್ತಷ್ಟು ಮುನ್ನಡೆಯಲು ನವೀಕೃತ ಶಕ್ತಿಯನ್ನು ಒದಗಿಸಲು ವೇದಿಕೆಯಾಗಿ ಕಾರ್ಯನಿರ್ವಹಿಸುತ್ತವೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.ಆಪರೇಷನ್ ಸಿಂಧೂರ್‌ನ ಯಶಸ್ಸುವನ್ನು ಈ ಸಂದರ್ಭದಲ್ಲಿ ಆಚರಿಸಲು ಸಿದ್ಧವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಜ್ಞಾನಪಥ್‌ನಲ್ಲಿ (ಕೆಂಪು ಕೋಟೆಗೆ ಎದುರಾಗಿರುವ) ಸ್ಥಾಪಿಸಲಾದ ವ್ಯೂ ಕಟ್ಟರ್‌ಗಳು ಆಪರೇಷನ್ ಸಿಂಧೂರ್ ಲೋಗೋವನ್ನು ಮತ್ತು ಸಶಸ್ತ್ರ ಪಡೆಗಳ ಸಿಬ್ಬಂದಿಯನ್ನು ರಾಷ್ಟ್ರದ ರಕ್ಷಕರು ಎಂದು ಸಂಕೇತಿಸುವ ಸಿಲೂಯೆಟ್ ಚಿತ್ರಗಳನ್ನು ಹೊಂದಿವೆ.ಈ ಸನ್ನೆಯೊಂದಿಗೆ, ಸರ್ಕಾರವು ಮೂರು ತಿಂಗಳ ಹಿಂದೆ ನಡೆದ ಮಿಲಿಟರಿ ಕಾರ್ಯಾಚರಣೆಯ ಮಹತ್ವವನ್ನು ಒತ್ತಿಹೇಳಿದೆ.ಪಹಲ್ಗಾಮ್ ಹತ್ಯಾಕಾಂಡಕ್ಕೆ ಪ್ರತಿಕ್ರಿಯೆಯಾಗಿ ಭಾರತವು ಮೇ 7 ರ ಆರಂಭದಲ್ಲಿ ಪಾಕಿಸ್ತಾನ ಮತ್ತು ಪಿಒಕೆಯಲ್ಲಿ ಒಂಬತ್ತು ಭಯೋತ್ಪಾದಕ ಶಿಬಿರಗಳನ್ನು ನಿಖರವಾದ ದಾಳಿಗಳೊಂದಿಗೆ ನಾಶಪಡಿಸಿತು.ಸ್ವಲ್ಪ ಸಮಯದ ನಂತರ, ಭಾರತೀಯ ಸೇನೆಯ ಸಾಮಾಜಿಕ ಮಾಧ್ಯಮ ಖಾತೆಗಳು ಪೋಸ್ಟರ್‌ನೊಂದಿಗೆ ಸಂದೇಶವನ್ನು ಹೊಂದಿದ್ದವು, ಅದು ಈಗ ಆಪರೇಷನ್ ಸಿಂಧೂರ್‌ನ ನಿರ್ಣಾಯಕ ಚಿತ್ರವಾಗಿದೆ.

ಪೋಸ್ಟರ್‌ನಲ್ಲಿ ಆಪರೇಷನ್ ಸಿಂಧೂರ್ ಎಂದು ಬರೆಯಲಾಗಿದ್ದು, ವಿವಾಹಿತ ಹಿಂದೂ ಮಹಿಳೆಯರು ಧರಿಸುವ ಸಿಂಧೂರವನ್ನು ಹೊತ್ತ ಸಣ್ಣ ಬಟ್ಟಲು ಎರಡನೇ ಪದದ ಮೊದಲ ಓ ಅನ್ನು ರೂಪಿಸುತ್ತದೆ, ಆದರೆ ಎರಡನೇ ಓ ಅದರ ಸುತ್ತಲೂ ಪುಡಿಯ ಒಂದು ಹನಿಯನ್ನು ಹೊಂದಿದೆ. ಹಿಂದಿ ಮತ್ತು ಇಂಗ್ಲಿಷ್ ಆಮಂತ್ರಣ ಪತ್ರಗಳಲ್ಲಿ ಆಹ್ವಾನ ಪತ್ರಿಕೆಯ ಮೇಲಿನ ಬಲ ಮೂಲೆಯಲ್ಲಿ ಈ ಚಿತ್ರವಿದ್ದರೆ, ವಿಶ್ವದ ಅತಿ ಎತ್ತರದ ರೈಲ್ವೆ ಕಮಾನು ಸೇತುವೆಯಾದ ಚೆನಾಬ್ ಸೇತುವೆಯ ಸಿಲೂಯೆಟ್ ಚಿತ್ರವು ಕಾರ್ಡ್‌ಗಳ ಕೆಳಭಾಗದಲ್ಲಿದೆ, ಇವುಗಳನ್ನು ಹೆಚ್ಚಾಗಿ ರಕ್ಷಣಾ ಸಚಿವಾಲಯದ ಆಮಂತ್ರಣ ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ನೀಡಲಾಗುತ್ತದೆ.ಆಪರೇಷನ್ ಸಿಂಧೂರ್‌ಗೆ ಮೀಸಲಾಗಿರುವ ಭಾರತೀಯ ಸೇನೆಯ ನಿಯತಕಾಲಿಕ ಬ್ಯಾಚೀಟ್ ನ ಇತ್ತಿ?ಚಿನ ಆವೃತ್ತಿಯ ಪ್ರಕಾರ, ಮಿಲಿಟರಿ ಕಾರ್ಯಾಚರಣೆಯ ಲೋಗೋವನ್ನು ಲೆಫ್ಟಿನೆಂಟ್ ಕರ್ನಲ್ ಹರ್ಷ್ ಗುಪ್ತಾ ಮತ್ತು ಹವಿಲ್ದಾರ್ ಸುರಿಂದರ್ ಸಿಂಗ್ ವಿನ್ಯಾಸಗೊಳಿಸಿದ್ದಾರೆ.ಜಮ್ಮು ಮತ್ತು ಕಾಶ್ಮೀರದಲ್ಲಿರುವ ಚೆನಾಬ್ ಸೇತುವೆಯನ್ನು ಜೂನ್‌ನಲ್ಲಿ ಪ್ರಧಾನಿ ಮೋದಿ ಉದ್ಘಾಟಿಸಿದರು.ಈ ಸಂದರ್ಭದಲ್ಲಿ ಮೋದಿ, ಈ ರಚನೆಯು ಭಾರತದ ಮಹತ್ವಾಕಾಂಕ್ಷೆಗೆ ಸಾಕ್ಷಿಯಾಗಿದೆ ಎಂದು ಹೇಳಿದ್ದರು.ಐಫೆಲ್ ಟವರ್ ನೋಡಲು ಜನರು ಪ್ಯಾರಿಸ್‌ಗೆ ಪ್ರಯಾಣಿಸುವಾಗ, ಚೆನಾಬ್ ಸೇತುವೆ ಎತ್ತರದಲ್ಲಿ ಅದನ್ನು ಮೀರಿಸುತ್ತದೆ, ಇದು ನಿರ್ಣಾಯಕ ಮೂಲಸೌಕರ್ಯ ಸಾಧನೆ ಮಾತ್ರವಲ್ಲದೆ ಉದಯೋನ್ಮುಖ ಪ್ರವಾಸಿ ಆಕರ್ಷಣೆಯಾಗಿದೆ ಎಂದು ಅವರು ಗಮನಿಸಿದರು.ಒಟ್ಟು 2,500 ಪುರುಷ ಮತ್ತು ಮಹಿಳಾ ಎನ್‌ಸಿಸಿ ಕೆಡೆಟ್‌ಗಳು (ಸೇನೆ, ನೌಕಾಪಡೆ ಮತ್ತು ವಾಯುಪಡೆಯ ವಿಭಾಗಗಳಿಂದ) ಮತ್ತು ಟಿ"ಮೈ ಭಾರತ್?ಟಿ" ಸ್ವಯಂಸೇವಕರು ಆಚರಣೆಯಲ್ಲಿ ಭಾಗವಹಿಸಲಿದ್ದಾರೆ. ಈ ಕೆಡೆಟ್‌ಗಳು ಮತ್ತು ಮೈ ಭಾರತ್ ಸ್ವಯಂಸೇವಕರು ಗ್ಯಾನ್‌ಪಥ್‌ನಲ್ಲಿ ಕೋಟೆಯ ಎದುರಿನ, ನಯ ಭಾರತ್ ಲೋಗೋವನ್ನು ರೂಪಿಸುತ್ತಾರೆ ಎಂದು ಸಚಿವಾಲಯ ತಿಳಿಸಿದೆ.ಮುಖ್ಯ ಆಚರಣೆಗಳ ನಂತರ, ಸಂಜೆ, ಆಪರೇಷನ್ ಸಿಂಧೂರ್‌ನ ವಿಜಯವನ್ನು ಆಚರಿಸಲು ಆಗಸ್ಟ್ 15 ರಂದು ದೇಶಾದ್ಯಂತ 140 ಕ್ಕೂ ಹೆಚ್ಚು ಪ್ರಮುಖ ಸ್ಥಳಗಳಲ್ಲಿ ಸಶಸ್ತ್ರ ಪಡೆಗಳು ಮತ್ತು ಅರೆಸೈನಿಕ ಪಡೆಗಳ ಹಲವಾರು ಸಂಗೀತ ಬ್ಯಾಂಡ್‌ಗಳು ಪ್ರದರ್ಶನ ನೀಡಲಿವೆ.ಈ ಕಾರ್ಯಕ್ರಮಗಳು 79 ನೇ ಸ್ವಾತಂತ್ರ್ಯ ದಿನದಂದು ರಾಷ್ಟ್ರದ ಸಂಭ್ರಮಕ್ಕೆ ಲಯ ಮತ್ತು ಭವ್ಯತೆಯನ್ನು ಸೇರಿಸಲು ಪ್ರಯತ್ನಿಸುತ್ತವೆ, ನಾಗರಿಕರಿಗೆ ಸ್ಫೂರ್ತಿದಾಯಕ ರಾಗಗಳು ಮತ್ತು ಶಿಸ್ತಿನ ಕಲಾತ್ಮಕತೆಯ ಮೂಲಕ ದೇಶಭಕ್ತಿಯ ಉತ್ಸಾಹವನ್ನು ಅನುಭವಿಸಲು ಅವಕಾಶವನ್ನು ನೀಡುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಭಾರತೀಯ ಸೇನೆ, ನೌಕಾಪಡೆ, ವಾಯುಪಡೆ, ಭಾರತೀಯ ಕರಾವಳಿ ಕಾವಲು ಪಡೆ, ಎನ್‌ಸಿಸಿ, ಸಿಆರ್‌ಪಿಎಫ್, ಐಟಿಬಿಪಿ, ಸಿಐಎಸ್‌ಎಫ್, ಎಸ್‌ಎಸ್‌ಬಿ, ಬಿಎಸ್‌ಎಫ್, ಐಡಿಎಸ್, ಆರ್‌ಪಿಎಫ್ ಮತ್ತು ಅಸ್ಸಾಂ ರೈಫಲ್‌ನ ಬ್ಯಾಂಡ್‌ಗಳು ಈ ಪ್ರದರ್ಶನಗಳನ್ನು ನೀಡಲಿವೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.ಈ ವರ್ಷ ಕೆಂಪು ಕೋಟೆಯಲ್ಲಿ ನಡೆಯುವ ಆಚರಣೆಗಳನ್ನು ವೀಕ್ಷಿಸಲು ವಿವಿಧ ಕ್ಷೇತ್ರಗಳಿಂದ ಸುಮಾರು 5,000 ವಿಶೇಷ ಅತಿಥಿಗಳನ್ನು ಆಹ್ವಾನಿಸಲಾಗಿದೆ. ಇವರಲ್ಲಿ 2025 ರ ವಿಶೇಷ ಒಲಿಂಪಿಕ್‌ನ ಭಾರತೀಯ ತಂಡ, ಅಂತರರಾಷ್ಟ್ರೀಯ ಕ್ರಿಡಾಕೂಟಗಳ ವಿಜೇತರು, ಖೇಲೋ ಇಂಡಿಯಾ ಪ್ಯಾರಾ ಕ್ರಿಡಾಕೂಟದ ಚಿನ್ನದ ಪದಕ ವಿಜೇತರು, ರಾಷ್ಟ್ರಿ?ಯ ಜೇನುಸಾಕಣೆ ಮತ್ತು ಜೇನುತುಪ್ಪ ಮಿಷನ್ ಅಡಿಯಲ್ಲಿ ತರಬೇತಿ ಪಡೆದ ಮತ್ತು ಆರ್ಥಿಕವಾಗಿ ಸಹಾಯ ಪಡೆದ ಅತ್ಯುತ್ತಮ ಸಾಧನೆ ಮಾಡಿದ ರೈತರು ಮತ್ತು ಆನ್‌ಲೈನ್ ಅಥವಾ ಆಫ್‌ಲೈನ್ ರಸಪ್ರಶ್ನೆಗಳು ಮತ್ತು ಇತರ ವಿಷಯಾಧಾರಿತ ಸ್ಪರ್ಧೆಗಳಲ್ಲಿ ವಿಜೇತರಾದ ದೆಹಲಿ ಮೂಲದ ಶಾಲಾ ಮಕ್ಕಳು ಸೇರಿದ್ದಾರೆ.



**ಕಲಬುರಗಿ,ಆ.15–** ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು ಇಂದು ದಾಸೋಹ ಮಹಾಮನೆಗೆ ಆಗಮಿಸಿ ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾ ಅವರಿಗೆ ಅಂತಿಮ ನಮನ ಸಲ್ಲಿಸಿದರು.ಸರಕಾರದ ವತಿಯಿಂದ ಗೌರವ ವಂದನೆ ಸಲ್ಲಿಸಲಾಯಿತು.ಮಾತೋಶ್ರೀ ದಾಕ್ಷಾಯಿಣಿ ಅಪ್ಪಾ, ಚಿರಂಜೀವಿ ದೊಡ್ಡಪ್ಪ ಅಪ್ಪಾ,ಅಲ್ಲಮಪ್ರಭು ಪಾಟೀಲ,ಬಸವರಾಜ ದೇಶಮುಖ, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಕೆಕೆಆರ್ಡಿಬಿ ಅಧ್ಯಕ್ಷ ಡಾ.ಅಜಯಸಿಂಗ್ ,ಬಿ.ಜಿ ಪಾಟೀಲ,ದತ್ತಾತ್ರೇಯ ಪಾಟೀಲ ರೇವೂರ,ರಾಜಶೇಖರ ಪಾಟೀಲ ಹುಮನಾಬಾದ್,ಅರುಣಕುಮಾರ ಪಾಟೀಲ,ಶರಣು ಮೋದಿ ಹಾಗೂ ಇತರರಿದ್ದರು.



**ಕಲಬುರಗಿ,ಆ.15–** ಶರಣಬಸವೇಶ್ವರ ಸಂಸ್ಥಾನದ 8ನೇ ಪೀಠಾಧಿಪತಿ ಡಾ. ಶರಣಬಸವಪ್ಪ ಅಪ್ಪಾ ಅವರ ಅಂತಿಮ ದರ್ಶನ ಪಡೆದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ,ಶಶೀಲ ನಮೋಶಿ, ಬಿ.ಜಿ ಪಾಟೀಲ,ರಾಜಕುಮಾರ ಪಾಟೀಲ ತೇಲ್ಕೂರ,ಚಂದು ಪಾಟೀಲ,ಸಿದ್ರಾಮಪ್ಪ ಪಾಟೀಲ ಧಂಗಾಪುರ,ಶರಣಪ್ಪ ತಳವಾರ,ಬಾಬುರಾವ ಚವ್ಹಾಣ,ಹರ್ಷಾನಂದ ಗುತ್ತೇದಾರ,ಶಿವರಾಜ ಪಾಟೀಲ ರದ್ದೇವಾಡಗಿ ಮೊದಲಾದ ಗಣ್ಯರು ಅಂತಿಮ ನಮನ ಸಲ್ಲಿಸಿದರು

# ನಾಳೆ ನಗರದಲ್ಲಿ ಶ್ರೀಕೃಷ್ಣ ಜಯಂತಿ: ಗಾದೆಪ್ಪ




**ಬಳ್ಳಾರಿ, ಆ.15–** ಈ ವರ್ಷದ ಶ್ರೀಕೃಷ್ಣ ಜಯಂತಿಯನ್ನು ನಾಳೆ ಆ 16 ರಂದು ಶ್ರದ್ಧಾ ಭಕ್ತಿಯಿಂದ ಜಿಲ್ಲಾಡಳಿತ ಮತ್ತು ಬಳ್ಳಾರಿ ಜಿಲ್ಲಾ ಗೊಲ್ಲರ ಸಂಘದಿಂದ ಆಚರಿಸುತ್ತಿದೆ ಎಂದು ಸಂಘದ ಅಧ್ಯಕ್ಷ ಪಿ.ಗಾದೆಪ್ಪ ತಿಳಿಸಿದ್ದಾರೆ.

ನಾಳೆ ಬೆಳಿಗ್ಗೆ 9 ಗಂಟೆಗೆ ನಗರದ ದುರ್ಗಮ್ಮ ದೇವಸ್ಥಾನದಿಂದ ಶ್ರೀಕೃಷ್ಣನ ಭಾವಚಿತ್ರದ ಮೆರವಣಿಗೆ ಆರಂಭಗೊಳ್ಳಲಿದ್ದು. ಅಂಡರ್ ಬ್ರಿಡ್ಜ್, ಗಡಿಗಿ ಚೆನ್ನಪ್ಪ ವೃತ್ತದಿಂದ ಬಿಡಿಎಎ ಮೈದಾನದ ಸಭಾಂಗಣಕ್ಕೆ ಬಂದು ತಲುಪಲಿದೆ. ಇಲ್ಲಿ 11 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯಲಿದ್ದು ಜನಪ್ರತಿನಿಧಿಗಳು ಅಂದರೆ ಸಚಿವರು, ಸಂಸದರು, ಶಾಸಕರು, ಮೇಯರ್, ಪಾಲಿಕೆ ಸದಸ್ಯರು , ಸಂಘದ ಪದಾಧಿಕಾರಿಗಳು ಸಮುದಾಯದ ಜನತೆ ಪಾಲ್ಗೊಳ್ಳಲಿದ್ದಾರೆ.

ಕಸಾಪ ಜಿಲ್ಲಾ ಮಾಜಿ ಅಧ್ಯಕ್ಷ ಸಿದ್ದರಾಮ ಕಲ್ಮಠ ಶ್ರೀಕೃಷ್ಣನ ಕುರಿತು ಉಪನ್ಯಾಸ ನೀಡಲಿದ್ದಾರೆ. ವೈ.ಬಸವರಾಜ್ ಮತ್ತು ಸಂಗಡಿಗರಿಂದ ಸಮೂಹ ನೃತ್ಯ ಪ್ರದರ್ಶಿಸಲಿದೆ.

ಸಂಘದಿಂದ ಸಂಜೆ 6 ಕ್ಕೆ ಸಂಘದ ಆವರಣದಲ್ಲಿ ಗೋಪೂಜೆ, ನಂದ ಗೋಕುಲ ಶಾಲಾ ಮಕ್ಕಳಿಂದ ಸಾಮೂಹಿಕ ನೃತ್ಯ, ಸಾಂಸ್ಕೃತಿಕ ಕಾರ್ಯಕ್ರಮಗಳ ಪ್ರದರ್ಶನ. ರಾತ್ರಿ 9 ರ ನಂತರ ಶ್ರೀ ಕೃಷ್ಣನಿಗೆ ಮೂಜೆ ಮಹಾ ಮಂಗಳಾರತಿ ನಡೆಯಲಿದೆಂದು ತಿಳಿಸಿದ್ದಾರೆ.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**

**9743497111 9743496111**

# ಶಾಸಕರಾದ ಬಸನಗೌಡ ದದ್ದಲ್ ಕಾರ್ಯಾಲಯದಲ್ಲಿ ಸ್ವಾತಂತ್ರ್ಯ ದಿನಾಚರಣೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.15–**ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರ ಕಾರ್ಯಾಲಯದಲ್ಲಿ ಆಗಸ್ಟ್ 15ರಂದು 79ನೇ ಸ್ವಾತಂತ್ರ್ಯ ದಿನಾಚರಣೆಯ ನಡೆಯಿತು.

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು.ಇದೆ ವೇಳೆ ನೆರದಿದ್ದ ಮುಖಂಡರು ಮತ್ತು ಅಭಿಮಾನಿಗಳಿಗೆ ಸ್ವಾತಂತ್ರ್ಯೋತ್ಸವದ ಶುಭಾಶಯಗಳನ್ನು ತಿಳಿಸಿದರು.ಈ ಸಂದರ್ಭದಲ್ಲಿ ಬ್ಲಾಕ್ ಅಧ್ಯಕ್ಷರು, ಪಕ್ಷದ ಹಿರಿಯ ಮುಖಂಡರು, ನಾಮ ನಿರ್ದೇಶಿತ ಸದಸ್ಯರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.



# ಜಿಲ್ಲಾಡಳಿತದಿಂದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಯಂತಿ



**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.15–** ಇಲ್ಲಿನ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಆಗಸ್ಟ್ 15ರಂದು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ 228ನೇ ಜಯಂತ್ಯುತ್ಸವ ಆಚರಣೆ ನಡೆಯಿತು.

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಇದೆ ವೇಳೆಯಲ್ಲಿ ರಾಯಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಅರ್ಪಿಸಿ ಗೌರವ ನಮನ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರಾದ ನಸೀರ್ ಅಹ್ಮದ್, ಜಿಲ್ಲಾಧಿಕಾರಿಗಳ ಕಚೇರಿಯ ಸಿಬ್ಬಂದಿ ಅಧಿಕಾರಿ ಮತ್ತು ಸಿಬ್ಬಂದಿ ಇದ್ದರು.

# ಅಲ್ಪಸಂಖ್ಯಾತ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಪ್ರತಿಭಾ ಪುರಸ್ಕಾರ ಪ್ರದಾನ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.15–** ಮಹಾತ್ಮಗಾಂಧೀ ಜಿಲ್ಲಾ ಕ್ರೀಡಾಂಗಣದಲ್ಲಿ ಆಗಸ್ಟ್ 15ರಂದು ನಡೆದ ಸ್ವಾತಂತ್ರ್ಯೋತ್ಸವ ಸಮಾರಂಭದಲ್ಲಿ, ಸಚಿವರಾದ ಡಾ.ಶರಣಪ್ರಕಾಶ ಆರ್ ಪಾಟೀಲ ಅವರು ಅಲ್ಪಸಂಖ್ಯಾತರ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಮೌಲಾನ ಅಬುಲ್ ಕಲಾಂ ಆಜಾದ್ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಿದರು.

ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2024–25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳಲ್ಲಿ ಮೊದಲ ಪ್ರಯತ್ನದಲ್ಲಿಯೇ ಶೇಕಡಾ 90ಕ್ಕಿಂತ ಹೆಚ್ಚು ಅಂಕಗಳಿಸಿದ ಅಗ್ರ ಶ್ರೇಣಿಯ ಅಲ್ಪಸಂಖ್ಯಾತರ ಸಮುದಾಯದ ಪ್ರತಿಭಾವಂತ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಾದ ರಾಯಚೂರು ಸಫೀಯಾ ಪ್ರೌಢಶಾಲೆಯ ವಿದ್ಯಾರ್ಥಿನಿ ಮೈಶಾ ತಂದೆ ಮನ್ಸೂರ್ ಶೇಖ್ ಶೇ.99.36, ರಾಯಚೂರಿನ ಸೇಂಟ್ ಮೇರಿ ಕಾನ್ವೆಂಟ್ ಪ್ರೌಢಶಾಲೆಯ ವಿದ್ಯಾರ್ಥಿನಿ ಮೀಸಂ ಫಾಜಿ ಶೇ.99.30, ಲಿಂಗಸುಗೂರಿನ ಲಿಟಲ್ ಏಂಜಲ್ಸ್ ಪ್ರೌಢಶಾಲೆಯ ವಿದ್ಯಾರ್ಥಿ ಉಮರ್ ಫಾರೂಕ್ ತಂದೆ ಖಾಜಾಹುಸೇನ್ ಶೇ.96.8, ಗಿಲ್ಲೆಸುಗೂರು ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿನಿ ಗೌಶಿಯ ಬೇಗಂ ತಂದೆ ಸೈಯದ್ ಫಾರೂಕ್ ಶೇ. 95.52ರಷ್ಟು



ಅಂಕಗಳನ್ನು ಗಳಿಸಿ ಮೌಲಾನ ಅಬುಲ್ ಕಲಾಂ ಆಜಾದ್ ಪ್ರತಿಭಾ ಪುರಸ್ಕಾರ ಪಡೆದುಕೊಂಡರು.

ಪಿಯುಸಿ ವಿಭಾಗದಲ್ಲಿ: ದ್ವಿತೀಯ ಪಿ.ಯು.ಸಿ 11 ವಿದ್ಯಾರ್ಥಿಗಳ ಪೈಕಿ ಮಾನ್ವಿ ಸರ್ವೋದಯ ಪಿಯುಸಿ ಕಾಲೇಜಿನ ವಿದ್ಯಾರ್ಥಿ ಕಾಶಿಫಾ ತಜರೀನ್ ತಂದೆ ಮೀರ್ ಲಿಯಾಕತ್ ಶೇ.98.67, ರಾಯಚೂರಿನ ಪೂರ್ಣಿಮಾ ಪಿಯು ಕಾಲೇಜ್ ವಿದ್ಯಾರ್ಥಿ ಎಂಡಿ ಮುಬಶೀರ್ ಅಲಿ ತಂದೆ ಎಂ ಜುನೇದ್ ಅವರಿಗೆ ಸಹ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಸೇರಿದಂತೆ ಅನೇಕ ಗಣ್ಯ ಮಹನಿಯರು ಇದ್ದರು.

# ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಕಮಲದಿನ್ನಿ ಗ್ರಾಮದಲ್ಲಿ ಸಸಿ ನೆಡುವ ಕಾರ್ಯಕ್ರಮ



**ಯುವ ಮಾರ್ಗ ಸುದ್ದಿ**

**ದೇವದುರ್ಗ,ಆ.15–** 79ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ದೇವದುರ್ಗದ ಮಲದಕಲ್ ಗೆಳೆಯರ ಬಳಗ ಮತ್ತು ಜ್ಞಾನವೃಕ್ಷ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಕಮಲದಿನ್ನಿ ಗ್ರಾಮದಲ್ಲಿ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. 'ಹಸಿರು ದೇವದುರ್ಗ' ಪರಿಕಲ್ಪನೆಯಡಿಯಲ್ಲಿ ಈ ಕಾರ್ಯಕ್ರಮ ನಡೆಯಿತು.

ಕಮಲದಿನ್ನಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ 100ಕ್ಕೂ ಹೆಚ್ಚು ಸಸಿಗಳನ್ನು ನೆಡಲಾಯಿತು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ರೇಖಾ, ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷರಾದ ಶಿವರಾಜ್ ಭಾವಿಮಾನಿ, ಅಮರೇಗೌಡ ಪೊಲೀಸ್ ಪಾಟೀಲ್, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಮುದುಕಪ್ಪ ಜಿನ್ನಾ, ಗ್ರಾಮ ಪಂಚಾಯಿತಿ ಸದಸ್ಯ ಸಾಬಯ್ಯ, ಡಿಎಸ್ಎಸ್ ಮುಖಂಡರು, ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಪರಶುರಾಮ್, ಸಂಶೋಧನಾ ವಿದ್ಯಾರ್ಥಿಯಾದ ನರಸಪ್ಪ ನಾಯಕ ಚಂಪಾ, ಹಾಗೂ ಗ್ರಾಮದ ಯುವಕರು ಮತ್ತು ಶಾಲಾ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

ಈ ಕಾರ್ಯಕ್ರಮವನ್ನು ಸಂಶೋಧನಾ ವಿದ್ಯಾರ್ಥಿಯಾದ ನರಸಪ್ಪ ನಾಯಕ ಚಂಪಾ ನಡೆಸಿಕೊಟ್ಟರು. ಸಹಾಯಕ ಪ್ರಾಧ್ಯಾಪಕರಾದ ಡಾ. ಮಾರುತಿ ಕುಮಾರ ಮಲದಕಲ್ ಅವರ ನೇತೃತ್ವದಲ್ಲಿ, ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಕಳೆದ ಮೂರು ವರ್ಷಗಳಿಂದ ದೇವದುರ್ಗ ತಾಲ್ಲೂಕಿನಾದ್ಯಂತ ಪ್ರತಿ ವರ್ಷ 5 ಸಾವಿರ ಸಸಿಗಳನ್ನು ನೆಡಲಾಗುತ್ತಿದೆ. ಈ ಕಾರ್ಯಕ್ರಮವು ಅದೇ ಸಸಿ ನೆಡುವ ಅಭಿಯಾನದ ಭಾಗವಾಗಿತ್ತು.

# ಸ್ವಾತಂತ್ರ್ಯಹೋರಾಟಗಾರರಿಗೆ ಪತ್ರಿಕೆಗಳು ಸ್ಫೂರ್ತಿ ತುಂಬಿವೆ : ಗುರುರಾಜ ಗೌಡೂರು



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಆ.15–** ದೇಶಕ್ಕೆ ಸ್ವಾತಂತ್ರ್ಯತಂದುಕೊಡುವಲ್ಲಿ ಹೋರಾಟಗಾರರಿಗೆ ಪತ್ರಿಗೆಗಳಲ್ಲಿ ದಿನನಿತ್ಯ ಪ್ರಕಟವಾಗುವ ದೇಶಾಭಿಮಾನ ಮೂಡಿಸುವ ಮತ್ತು ಬ್ರಿಟಿಷರ ದಬ್ಬಾಳಿಕೆಯ ಆಡಳಿತದ ಸುದ್ದಿಗಳು ಸ್ಫೂರ್ತಿ ತುಂಬಿವೆ, ಆದ್ದರಿಂದ ಸ್ವಾತಂತ್ರ್ಯ ಹೋರಾಟದಲ್ಲಿ ಪತ್ರಿಕೆಗಳ ಪಾತ್ರ ಅಪಾರ ಇದೆ ಎಂದು ಪತ್ರಕರ್ತರ ಸಂಘದ ಅಧ್ಯಕ್ಷ ಗುರುರಾಜ ಗೌಡುರ್ ಅಭಿಪ್ರಾಯ ಪಟ್ಟರು.

ಪಟ್ಟಣದ ಪತ್ರಿಕಾ ಭವನದಲ್ಲಿ 79ನೇ ಸ್ವಾತಂತ್ರ್ಯೋತ್ಸದ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಪತ್ರಕರ್ತರು ಯುವಕರಲ್ಲಿ, ಹೋರಾಟಗಾರರಲ್ಲಿ ನಿತ್ಯ ದೇಶಭಕ್ತಿ ಮೂಡಿಸಿ ಹೋರಾಟಕ್ಕೆ ಸ್ಫೂರ್ತಿ ನೀಡಿದ್ದಾರೆ.ಜೊತೆಗೆ ಸ್ವಾತಂತ್ರ್ಯ ಹೋರಾಟದಲ್ಲಿ ಸ್ವಾತಂತ್ರ್ಯ ಪೂರ್ವ ಹಾಗೂ ನಂತರದಲ್ಲಿ ದೇಶಕ್ಕೆ ಕನ್ನಡಿಗರ ಕೊಡುಗೆ ಬಹಳ ಅಪಾರವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಅಮರಯ್ಯ ಘಂಟಿ, ಉಪಾಧ್ಯಕ್ಷ ಮಹ್ಮದ್ ಖಾಜಾಹುಸೇನ್, ಜಿಲ್ಲಾ ಸಮಿತಿ ಸದಸ್ಯರಾದ ಶಿವರಾಜ ಕೆಂಭಾವಿ, ಹಿರಿಯ ಪತ್ರಕರ್ತ ಎನ್. ಬಸವರಾಜ, ಅಮರೇಶ ಕಲ್ಲೂರು, ಶರಣಯ್ಯ ಒಡೆಯರ್, ಪತ್ರಕರ್ತರಾದ ಲಕ್ಷ್ಮಣ ಬಾರಿಕೇರ್, ಶಶಿಧರ ಕಂಚಿಮಠ, ರಾಘವೇಂದ್ರ ಭಜಂತ್ರಿ, ರಾಜೇಶ ಮಾಣಿಕ್, ಪಂಪಾಪತಿ, ಗಂಗಾಧರ ನಾಯಕ, ಯಲ್ಲಪ್ಪ ವಂದಲಿ, ಮುಸ್ತಫಾ, ಗೌತಮ್, ಸಾದತಲಿ, ಪ್ರಮೋದ ಕನಕಗಿರಿ, ದೇವರಾಜ ನಾಯಕ, ಬಾಬಿ ಸೇರಿ ಇತರರು ಇದ್ದರು.

# ಮಹಾನ್ ನಾಯಕರ ತ್ಯಾಗ, ಬಲಿದಾನದವೇ ಸ್ವಾತಂತ್ರ್ಯ : ವಿನಯಕುಮಾರ ಗಣಾಚಾರಿ



**ಲಿಂಗಸುಗೂರು,ಆ.15–** ಭಾರತ ಸುಮಾರು 200 ವರ್ಷಗಳಿಗೂ ಹೆಚ್ಚು ಕಾಲ ಬ್ರಿಟಿಷರ ದರ್ಪದ ಆಡಳಿತ, ಭ್ರಷ್ಟಾಚಾರ, ದಬ್ಬಾಳಿಕೆಯ ಆಡಳಿತಕ್ಕೆ ಒಳಪಟ್ಟಿತ್ತು, ಬ್ರಿಟಿಷರ ವಿರುದ್ಧ ಮಹಾತ್ಮ ಗಾಂಧೀಜಿ, ಸರ್ದಾರ್ ವಲ್ಲಭ ಭಾಯಿ ಪಟೇಲ್, ಚಂದ್ರಶೇಖರ್ ಆಜಾದ್, ಜವಾಹರ್ ಲಾಲ್ ನೆಹರು, ಸುಭಾಷ್ ಚಂದ್ರ ಬೋಸ್, ಭಗತ್ ಸಿಂಗ್ ಮುಂತಾದ ನಾಯಕರ ಪರಿಶ್ರಮದ ಪಲವಾಗಿ ಆಗಸ್ಟ್ 15 ರಂದು ನಮ್ಮ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿತು ಎಂದು ಶ್ರೀ ಉಮಾಮಹೇಶ್ವರಿ ಸಂಸ್ಥೆಯ ಆಡಳಿತ ಅಧಿಕಾರಿ ವಿನಯಕುಮಾರ ಗಣಾಚಾರಿ ಹೇಳಿದರು.

ಪಟ್ಟಣದ ನಾರಾಯಣಪುರ ರಸ್ತೆಯಲ್ಲಿರುವ ಶ್ರೀ ಉಮಾಮಹೇಶ್ವರಿ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಹಮ್ಮಿಕೊಂಡ 79 ನೇ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಭಾರತ ದೇಶ ಪ್ರಾಚೀನ ಕಾಲದಿಂದಲೂ ಶ್ರೀಮಂತ, ಸಂಪದ್ಭರಿತವಾದ ದೇಶಕ್ಕೆ ವ್ಯಾಪಾರ ಮಾಡಲು ಬಂದ ಬ್ರಿಟಿಷರು ನಂತರ ಅಖಂಡ ದೇಶವನ್ನು ವಶಪಡಿಸಿಕೊಂಡು ತಮ್ಮ ಅನುಕೂಲಕ್ಕೆ ತಕ್ಕಂತೆ ಬಳಸಿಕೊಂಡು ನಮ್ಮನ್ನು ಗುಲಾಮರನ್ನಾಗಿ ಮಾಡಿಕೊಂಡು ದಬ್ಬಾಳಿಯ ಆಡಳಿತವನ್ನು ನಡೆಸಿದರು.

ಇವರ ದಬ್ಬಾಳಿಕೆಯ ವಿರುದ್ಧ ಭಾರತೀಯರೆಲ್ಲರೂ ಒಗ್ಗಟ್ಟಾಗಿ ಹೋರಾಟ ಮಾಡಿ ಬ್ರಿಟಿಷರ ಆಳ್ವಿಕೆಯನ್ನು ಕಿತ್ತೆಸೆದು ಧೈರ್ಯ, ತ್ಯಾಗ, ಸ್ವರಾಜ್ಯಮತ್ತು ದಾಸ್ಯದಿಂದ ಬಿಡುಗಡೆಗೊಳಿಸಲು ನಡೆದ ದೀರ್ಘಕಾಲದ ಹೋರಾಟದ ಫಲವೇ ಈವತ್ತಿನ ಸ್ವಾತಂತ್ರ್ಯ, ಲಕ್ಷಾಂತರ ಜನರು ಸಕ್ರಿಯವಾಗಿ ಭಾಗವಹಿಸಿದ್ದರಲ್ಲದೆ ಸಾವಿರಾರು ಜನರ ತ್ಯಾಗ ಬಲಿದಾನ ಮಾಡಿದ್ದಾರೆ. ಅವರೆಲ್ಲರನ್ನೂ ಕೃತಜ್ಞತಾ ಪೂರ್ವಕವಾಗಿ ಗೌರವಿಸೋಣ. ವಿದ್ಯಾರ್ಥಿಗಳು ಈ ಹೋರಾಟಗಾರರ ದೇಶಾಭಿಮಾನ, ಕೆಚ್ಚೆದೆ, ಧೈರ್ಯವನ್ನು ತಮ್ಮ ಜೀವನದಲ್ಲೂ ಅಳವಡಿಸಿಕೊಂಡಾಗ ಮಾತ್ರ ಸ್ವಾತಂತ್ರ್ಯಕ್ಕೆ ಅರ್ಥ ಬರುತ್ತದೆ ಎಂದರು.

ಪ್ರಾಚಾರ್ಯರಾದ ವಿರೇಶ ಆದೋನಿ, ಸುರೇಶ ಜಿ, ಸಹ ಆಡಳಿತ ಅಧಿಕಾರಿ ಅಮರೇಶಸ್ವಾಮಿ ಮಾತನಾಡಿ, ಮಹಾತ್ಮಾ ಗಾಂಧೀಜಿ, ಭಗತ್ ಸಿಂಗ್, ಮದನ್ ಲಾಲ್ ಡಿಂಗ್ರಿ, ಸುಭಾಸ್ ಚಂದ್ರಭೋಸ್ ಇನ್ನೂ ಮುಂತಾದವರ ಕ್ರಾಂತಿಕಾರಿ ಹೋರಾಟ ವಿದ್ಯಾರ್ಥಿಗಳಿಗೆ ಮಾದರಿಯಾಗಲಿ ಎಂದರು. ಈ ಸಂದರ್ಭದಲ್ಲಿ ಉಪನ್ಯಾಸಕರಾದ ಮಂಜುನಾಥ್ ಜಿ, ಮಸ್ತಾನ್ ಸಾಬ್, ಯಮನೂರಪ್ಪ ಕೆ, ಚನ್ನಬಸವ, ಆನಂದ, ಜಾನಿ ಸರ್, ರಾಗಪ್ಪ, ಸಾಗರ ಕುಮಾರ, ಶಂಕ್ರಪ್ಪ ಖೈರವಾಡಗಿ, ಬಸವರಾಜ್, ಗದ್ದೆಪ್ಪ ಮತ್ತು ಉಪನ್ಯಾಸಕಿಯರಾದ ಸ್ವರ್ಣಲತಾ, ಶಾಂತಲಾ ಸೇರಿದದಂತೆ ವಿದ್ಯಾರ್ಥಿಗಳು ಇದ್ದರು.

**Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H**